# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 167 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 16–01–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 01 Issue - 167 | Title- Code: KARKAN 28269 | Chitradurga | Date: 16-01-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜೆ.ಜಿ.ಹಟ್ಟಿ ತಿಪ್ಪೇಸ್ವಾಮಿ ಪಾದಯಾತ್ರೆಗೆ ಮೊಳಕಾಲ್ಮೂರಲ್ಲಿ ಪೂರ್ವಭಾವಿ ಸಭೆ 2

ಕಾಯಕದಲ್ಲಿ ಮೇಲುಕೀಳು ಎಂಬುದಿಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ 3

ರಾಜ್ಯ ಮಟ್ಟದ ಸಮ್ಮೇಳನ ಯಶಸ್ವಿಗೆ ಚೊಂಕಕಟ್ಟ: ತರಡೂರು 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಬಿಜೆಪಿ ಬಿಂಬಿಸುತ್ತಿರುವ ರಾಮ ನಮಗೆ ಬೇಕಿಲ್ಲ: ಸಚಿವ ನಾಗೇಂದ್ರ

» **ಬಳ್ಳಾರಿ**

ಸಿಎಂ ಸಿದ್ದರಾಮಯ್ಯ ಅವರ ಹೆಸರಿನಲ್ಲಿಯೇ ರಾಮನಿದ್ದಾನೆ. ರಾಮ ಕಾಂಗ್ರೆಸ್ ಪಕ್ಷದ ಆಸ್ತಿ ಎಂದು ಸಚಿವ ಬಿ. ನಾಗೇಂದ್ರ ಹೇಳಿದ್ದಾರೆ. ವಾಲ್ಮೀಕಿ ಹೇಳಿದ ರಾಮರಾಜ್ಯವನ್ನು ಕಾಂಗ್ರೆಸ್ ಸ್ಥಾಪನೆ ಮಾಡಿದೆ ಎಂದಿರುವ ಬಿ. ನಾಗೇಂದ್ರ, ಬಿಜೆಪಿ ಬಿಂಬಿಸುತ್ತಿರುವ ರಾಮ ನಮಗೆ ಬೇಕಿಲ್ಲ ಎಂದಿದ್ದಾರೆ.ರಾಮಮಂದಿರದ ವಿಷಯವನ್ನು ಬಿಜಪಿಯವರು ರಾಜಕೀಯಗೊಳಿಸುತ್ತಿದ್ದಾರೆ. ನಮ್ಮ ರಾಮ ಎಲ್ಲರ ರಾಮ. ನಮಗೆ ಕುಟುಂಬ ಸಮೇತ ರಾಮ ಬೇಕು. ರಾಮ ಈ ಪ್ರಪಂಚದ ಆಸ್ತಿ. ಈ ದೇಶದ ಆಸ್ತಿ ಹಾಗೆಯೇ ಕಾಂಗ್ರೆಸ್ ಆಸ್ತಿ ಕೂಡ ಎಂದು ನಾಗೇಂದ್ರ ಹೇಳಿಕೆ ನೀಡಿದ್ದಾರೆ. ರಾಮಮಂದಿರ ನಿರ್ಮಾಣದ ಬಗ್ಗೆ ಅವರ ಪೂಜಾರಿಗಳು, ಸ್ವಾಮೀಜಿಗಳಲ್ಲೇ ವಿರೋಧವಿದೆ ಎಂದು ಆರೋಪಿಸಿದ ಬಿ. ನಾಗೇಂದ್ರ, ನಾವು ಖಂಡಿತವಾಗಿಯೂ ರಾಮ ವಿರೋಧಿಗಳಲ್ಲ ಎಂದು ಹೇಳಿದರು.

### ತಾಲೂಕಿನ ರಾಜ್ಯ ನೌಕರರ ಸಂಘದ ಸಭೆ

» **ಹೊಸದುರ್ಗ**

ಹೊಸದುರ್ಗ ಪಟ್ಟಣದ ಟಿ.ಬಿ.ವೃತ್ತದಲ್ಲಿರುವ ತಾಲೂಕಿನ ರಾಜ್ಯ ಸರಕಾರಿ ನೌಕರರ ಸಂಘದ ಕಾರ್ಯಾಲಯದಲ್ಲಿ ಜ.16ರ ಸಂಜೆ 5.30 ಗಂಟೆಗೆ ಕಾರ್ಯಕಾರಿ ಸಮಿತಿಯ ಸಭೆ ಕರೆಯಲಾಗಿದೆ ಎಂದು ಸಂಘದ ಅಧ್ಯಕ್ಷ ಆರ್.ಗಂಗಾಧರಪ್ಪ ತಿಳಿಸಿದ್ದಾರೆ. ತಾಲೂಕು ಶಾಖೆ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿಯ ಸದಸ್ಯರು, ತಾಲೂಕಿನ ವಿವಿಧ ಇಲಾಖೆಗಳ ಶಾಖಾ ವ್ಯಾಪ್ತಿಯ ವೃಂದ ಸಂಘಗಳ ಅಧ್ಯಕ್ಷರು, ಕಾರ್ಯದರ್ಶಿ, ಪದಾಧಿಕಾರಿಗಳು ಮತ್ತು ನಿವೃತ್ತ ನೌಕರರ ಸಂಘದ ಅಧ್ಯಕ್ಷರು, ಕಾರ್ಯದರ್ಶಿ ಮತ್ತು ಪದಾಧಿಕಾರಿಗಳಿಗೆ ತಪ್ಪದೇ ಸಕಾಲಕ್ಕೆ ಸಭೆಗೆ ಆಗಮಿಸಬೇಕು.



# ದಶರಥರಾಮೇಶ್ವರಕ್ಕೂ ಮತ್ತು ಅಯೋಧ್ಯೆಗಿದೆ ಐತಿಹಾಸಿಕ ನಂಟು!

ವಿಶೇಷ ವರದಿ

» **ಪಿ.ಟಿ.ಸಿದ್ಧೇಶ್ ಲಕ್ಕಿಹಳ್ಳಿ**

ಹೊಸದುರ್ಗ: ರಾಮಾಯಣ ಕಾಲದ ಪುರಾಣಪ್ರಸಿದ್ಧ ಪುಣ್ಯಕ್ಷೇತ್ರಗಳಲ್ಲಿ ದಕ್ಷಿಣಭಾರತದ ಕರ್ನಾಟಕ ರಾಜ್ಯದ ಹೊಸದುರ್ಗ ತಾಲೂಕಿನ ದಶರಥರಾಮೇಶ್ವರ ಕ್ಷೇತ್ರವೂ ಒಂದಾಗಿದೆ. ಇದೊಂದು ಅತ್ಯಂತ ಪ್ರಾಚೀನ ಧಾರ್ಮಿಕ ಕ್ಷೇತ್ರವಾಗಿದ್ದು, ದಶರಥ ರಾಮೇಶ್ವರ ಕ್ಷೇತ್ರಕ್ಕೂ ಮತ್ತು ಉತ್ತರಪ್ರದೇಶದ ಅ ಂ ು ೕ ೀ ದ, ೖ ಕ್ಷೇತ್ರಕ್ಕೂ ಬಹಳಷ್ಟು ನಂಟಿದೆ ಎಂಬುದು ಇಂದಿಗೂ ಪುರಾಣಕಥೆಗಳು ಮತ್ತು ಸ್ಥಳ ಮಹಿಮೆ ಸಾರಿ ಸಾರಿ ಹೇಳುತ್ತಿವೆ.

ಈ ಕ್ಷೇತ್ರದ ಇತಿಹಾಸ ಮತ್ತು ಮಹಿಮೆಯನ್ನು ಅರಿತ ಶ್ರೀರಾಮ ಸಂಸ್ಕೃತಿ ಶೋಧ ಸಂಸ್ಥಾನ ನ್ಯಾಸದ ಸಂಶೋಧನಾ ತಂಡ 2017 ರಲ್ಲಿ ಕ್ಷೇತ್ರಕ್ಕೆ ಭೇಟಿ ನೀಡಿ, ಐತಿಹ್ಯ ಕುರುಹುಗಳನ್ನು ಶೋಧನೆ ನಡೆಸಿತ್ತು. ದಶರಥ ಮತ್ತು ಶ್ರೀರಾಮಚಂದ್ರರು ಇಲ್ಲಿಗೆ ಭೇಟಿ ನೀಡಿದ್ದರು ಎಂಬ ಮಾಹಿತಿಯನ್ನು ದೃಢಪಡಿಸಿಕೊಂಡ ತಂಡ ಅಯೋಧ್ಯೆಯಲ್ಲಿ ನಿರ್ಮಾಣವಾಗುತ್ತಿರುವ ಮಂದಿರದ ಶಿಲಾನ್ಯಾಸಕ್ಕೆ ದಶರಥರಾಮೇಶ್ವರ ಕ್ಷೇತ್ರದಿಂದ ಪವಿತ್ರ ಜಲ ಮತ್ತು ಮೃತ್ತಿಕೆಯನ್ನು ಸಂಗ್ರಹಿಸಿ ತೆಗೆದುಕೊಂಡು ಹೋಗಿ, ರಾಮಮಂದಿರ ಕಟ್ಟಡದ ತಳಪಾಯಕ್ಕೆ ಹಾಕಲಾಗಿದೆ.

**ಕ್ಷೇತ್ರಕ್ಕಿದೆ ಐತಿಹಾಸಿಕ ಹಿನ್ನೆಲೆ:** ತ್ರೇತಾಯುಗದಲ್ಲಿ ಅಯೋಧ್ಯೆಯನ್ನು ಆಳುತ್ತಿದ್ದ ದಶರಥ ಮಹಾರಾಜನು, ತನ್ನ ಸೇನೆಯೊಂದಿಗೆ ಗೊಂಡಾರಣ್ಯಗಳಲ್ಲಿ ಬೇಟೆಗಾಗಿ ತಿರುಗುತ್ತಾ, ಇಲ್ಲಿನ ವಜ್ರಗಿರಿಗೆ ಬಂದು ತಲುಪಿದನು. ವಜ್ರಗಿರಿ ಅಂದಿನ ಸಂದರ್ಭದಲ್ಲಿ ಬಹುದೊಡ್ಡ ಕಾನನ ಮತ್ತು ಕಾಡುಪ್ರಾಣಿಗಳ ವಾಸಸ್ಥಳವೂ ಆಗಿತ್ತು. ದಶರಥ ರಾಜನೂ ಒಂದು ದಿನ ಬೇಟೆಯಾಡುತ್ತಾ ಅರಣ್ಯ ಮಧ್ಯದ ಸರೋವರ (ವಜ್ರಗಿರಿ) ಬಳಿಗೆ ಬಂದಾಗ ಮೃಗಗಳನ್ನು ಬೇಟೆಯಾಡಲು ಹುನ್ನಾರದಿಂದ ಕಾಯುತ್ತಿದ್ದ. ಆದರೆ, ಅದೇ ಸಮಯಕ್ಕೆ ದೂರದ ನಾಡಿನಿಂದ ತನ್ನ ಅಂಧ ತಂದೆ ಮತ್ತು ತಾಯಿಯನ್ನು ಹೊತ್ತು ಪುಣ್ಯಕ್ಷೇತ್ರಗಳ ದರ್ಶನಕ್ಕಾಗಿ ಸಂಚರಿಸುತ್ತಾ ಬಂದ ಶ್ರವಣಕುಮಾರನೆಂಬ ರಾಜಕುಮಾರ, ತನಗೂ ಮತ್ತು ತನ್ನ ತಂದೆ, ತಾಯಂದಿರಿಗೂ ಬಾಯರಿಕೆಯಾಗಿದ್ದುದರಿಂದ, ಆ ಸರೋವರದ ದಡದಲ್ಲಿ ಅಡ್ಡೆಯನ್ನು ಇಳಿಸಿ, ಸರೋವರದಲ್ಲಿ ತಾನು ನೀರು ಕುಡಿದು, ತಾಯ್ತಂದೆಯರಿಗೂ ನೀರನ್ನು ತರಲು ನೀರಿನ ಬಳಿಗೆ ಹೋಗಿದ್ದಾನೆ. ನೀರನ್ನುತುಂಬಿಕೊಳ್ಳುವಾಗ'ಬುಳುಬುಳು ' ಶಬ್ದವು ಬಂದಿದ್ದು, ಈ ಶಬ್ದವನ್ನು ಕೇಳಿದ ದಶರಥನಿಗೆ ಯಾವುದೋ ಬಾರೀಮೃಗ ನೀರು ಕುಡಿಯುತ್ತಿದೆ ಎಂಬ ಭ್ರಮೆಯನ್ನುಂಟುಮಾಡಿತು.

ದಶರಥನು ತಡ ಮಾಡದೆ, ಬಿಲ್ಲಿಗೆ ಬಾಣವನ್ನು ಹೂಡಿದನು. ಶಬ್ಧವೇದಿ ವಿದ್ಯೆಯ ಜ್ಞಾನದಿಂದ ಶಬ್ದ ಬಂದ ಕಡೆಗೆ ಗುರಿಯಿಟ್ಟು ಬಾಣ ಬಿಟ್ಟನು.

ದಶರಥನು ಬಿಟ್ಟ ಬಾಣ, ಶ್ರವಣಕುಮಾರನಿಗೆ ತಾಗಿ ಜೋರು ಧ್ವನಿಯಲ್ಲಿ ಚೀರುತ್ತಾ ಪ್ರಾಣಬಿಟ್ಟನು. ಮಗನ ಆರ್ತನಾದವನು ಕೇಳಿದ ವೃದ್ಧ ತಂದೆ– ತಾಯಂದಿರು ನನ್ನ ಮಗನಿಗೆ ಏನೋ ಪ್ರಾಣ ಸಂಕಟ ಬಂದಿದೆ ಎಂದು ತಡಬಡಿಸುವಷ್ಟರಲ್ಲಿಯೇ, ಅಲ್ಲಿಗೆ ಬಂದ ದಶರಥ ಅನಾಹುತವನ್ನು ತಿಳಿಸಿ, ಕ್ಷಮೆಯನ್ನು ಕೇಳಿದನು. ವೃದ್ಧ ದಂಪತಿಗಳಿಗೆ ತಮ್ಮ ಮಗನನ್ನು ವಧೆ ಮಾಡಿದವನ ಮೇಲೆ ಕೋಪ ಬಂದು, ' ನಮ್ಮ ಮಗನನ್ನು ಕೊಂದ ನೀನು ನಮ್ಮಂತೆಯೇ ಪುತ್ರಶೋಕದಿಂದ ನರಳಿ ಸಾಯುವಂತಾಗಲಿ' ಎಂದು ದಶರಥನಿಗೆ ಶಾಪವಿತ್ತು ಮರಣ ಹೊಂದಿದರು.

ದಶರಥನು ತನ್ನಿಂದಾದ ಪಾಪ ವಿಮೋಚನೆ ಮಾಡಿಕೊಳ್ಳಲು, ಸರೋವರದ ಬಳಿಯೇ ಅವರ ಸಮಾಧಿಗಳನ್ನು ನಿರ್ಮಿಸಿ, ಪೂಜಾ ಕಾರ್ಯಗಳನ್ನು ಪೂರೈಸಿದನು. ನಂತರ ಶಾಪ ವಿಮೋಚನೆಗಾಗಿ ಸಮೀಪದ ಗುಹೆಯಲ್ಲಿ ಶಿವಲಿಂಗವನ್ನು ಪ್ರತಿಷ್ಠಾಪಿಸಿ, ಪೂಜೆ ಸಲ್ಲಿಸಿದನು. ದಶರಥನು ಪ್ರತಿಷ್ಠಾಪಿಸಿದ ಶಿವಲಿಂಗವನ್ನು ಮುಂದೆ ಶ್ರೀರಾಮನು ವನವಾಸಕ್ಕೆ ಬಂದಿದ್ದಂತಹ ಸಂದರ್ಭದಲ್ಲಿ ಪೂಜಿಸಿದ್ದರಿಂದ ಈ ಕ್ಷೇತ್ರಕ್ಕೆ ದಶರಥರಾಮೇಶ್ವರ ಎಂಬ ಹೆಸರು ಬಂದಿದೆ ಎನ್ನಲಾಗಿದೆ. ಇದಕ್ಕೆ ಹಿಂಬು ನೀಡುವಂತೆ ಕ್ಷೇತ್ರ ಕಾನನದಲ್ಲಿದ್ದು, ಇಂದಿಗೂ, ಗುಹೆಯ ಮುಂಭಾಗದಲ್ಲಿರುವ ಪರ್ವತವನ್ನು 'ಶ್ರವಣಕುಮಾರನ ಪರ್ವತ' ಎಂದು ಭಕ್ತರು ಕರೆಯುವುದುಂಟು. ಗುಹೆಯಲ್ಲಿ ಸ್ಥಾಪಿತ ಶಿವಲಿಂಗವಿದ್ದು, ಗುಹೆಗೆ ಹೊಂದಿಕೊಂಡೆ ಇಲ್ಲಿ ನಿತ್ಯವೂ ನೀರು ಹರಿಯುತ್ತವೆ. ಶ್ರವಣಕುಮಾರನ ಸಮಾಧಿಯ ಜೊತೆಗೆ ಆತನ ತಂದೆ– ತಾಯಿಯಂದಿರ ಸಮಾಧಿಗಳು ಇಲ್ಲಿರುವುದನ್ನು ನಾವಿಂದು ಕಾಣಬಹುದಾಗಿದೆ.





ದಶರಥ ರಾಮೇಶ್ವರ ಕ್ಷೇತ್ರ ಇದೊಂದು ಐತಿಹಾಸಿಕ ಪುಣ್ಯಕ್ಷೇತ್ರವಾಗಿದ್ದು, ಇದು ಉದಾಸೀನಕ್ಕೆ ಒಳಪಟ್ಟಿರುವುದು ಬೇಸರ ತರಿಸಿದೆ. ಈ ಕ್ಷೇತ್ರಕ್ಕೆ ದಶರಥ ಮತ್ತು ಶ್ರೀರಾಮರು ಬಂದು ಪೂಜೆ ಸಲ್ಲಿಸಿ ಹೋದ, ಇತಿಹಾಸವಿದೆ. ಇದು ಪ್ರಾಚೀನ ಐತಿಹಾಸಿಕ ಕ್ಷೇತ್ರವಾಗಿದ್ದು, ಇಲ್ಲಿ ಪುರತತ್ವ ಮತ್ತು ಪ್ರಾಕ್ತನ ಇಲಾಖೆಯಿಂದ ಸಾಕಷ್ಟು ಸಂಶೋಧನೆ ಮತ್ತು ಅಧ್ಯಯನಗಳು ನಡೆಯಬೇಕಿದೆ. ಇಲ್ಲಿಗೆ ನಿತ್ಯವೂ ಹೊರ ಜಿಲ್ಲೆ ಮತ್ತು ಹೊರ ರಾಜ್ಯಗಳಿಂದ ಸಾವಿರಾರು ಭಕ್ತರು ದೇವರ ದರ್ಶನಕ್ಕೆ ಬರುತ್ತಾರೆ. ಬರುವ ಭಕ್ತರಿಗೆ ಮೂಲಸೌಕರ್ಯಗಳ ಅಗತ್ಯವಿದ್ದು, ಅಯೋಧ್ಯೆಯಂತೆಯೇ ಶ್ರೀ ರಾಮನು ಬಂದು ಹೋಗಿರುವ, ದಶರಥ ರಾಮೇಶ್ವರ ಕ್ಷೇತ್ರವನ್ನು ಅಭಿವೃದ್ಧಿಪಡಿಸುವಂತೆ ಶ್ರೀರಾಮ ಜನ್ಮಭೂಮಿ ಟ್ರಸ್ಟ್ ನವರಿಗೆ ಪತ್ರ ಬರೆಯುವೆ. ಬಸ್ ಸೌಲಭ್ಯ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಮಾಡುವಂತೆ ಶಾಸಕ ಬಿ.ಜಿ.ಗೋವಿಂದಪ್ಪನವರಿಗೆ ತಿಳಿಸುವೆ. ಅಭಿವೃದ್ಧಿಯಾದರೆ, ಇದೊಂದು ರಾಜ್ಯದಲ್ಲಿಯೇ ಸುಪ್ರಸಿದ್ಧ ಧಾರ್ಮಿಕ ಕ್ಷೇತ್ರವಾಗಲಿದೆ.

» **ಶ್ರೀ ಶಾಂತವೀರ ಸ್ವಾಮೀಜಿ. ಪೀಠಾಧ್ಯಕ್ಷರು, ಕುಂಚಿಟಿಗ ಮಠ, ಹೊಸದುರ್ಗ**

ಅಯೋಧ್ಯೆಯ ಶ್ರೀರಾಮನು ವನವಾಸ ಬಂದಿದ್ದಂತಹ ಸಮಯದಲ್ಲಿ ದಶರಥರಾಮೇಶ್ವರ ಕ್ಷೇತ್ರಕ್ಕೂ ಬಂದಿದ್ದನು ಎಂದು ನಮ್ಮ ಪೂರ್ವಿಕರು ಹೇಳುತ್ತಿದ್ದರು. ಇತ್ತೀಚೆಗೆ ಅಂದರೆ, 6 ವರ್ಷಗಳ ಹಿಂದೆ ಇಲ್ಲಿಗೆ ಶ್ರೀ ರಾಮ ಸಂಸ್ಕೃತಿ ಶೋಧ ಸಂಸ್ಥಾನ ನ್ಯಾಸದ ಸಂಶೋಧನ ತಂಡ ಭೇಟಿ ನೀಡಿತ್ತು. ಕ್ಷೇತ್ರದ ಮಹಿಮೆಯ ಬಗ್ಗೆ ಅವರಿಗೆ ಹೇಳಿದ್ದೆವು. ಅವರು ಬಂದಂತಹ ಸಂದರ್ಭದಲ್ಲಿ ಸ್ವಾಮಿಯ ಉತ್ಸವ ಮೂರ್ತಿ ಹೊರಟಿತ್ತು. ದೇವರ ಬಳಿಗೆ ಬಂದ ತಂಡ ರಾಮಮಂದಿರ ನಿರ್ಮಾಣದ ಕುರಿತು ಕೇಳಿದ್ದರು. ಇದಕ್ಕೆ ದೇವರು ಒಂದು ವರ್ಷದ ಒಳಗೆ ಮಂದಿರ ನಿರ್ಮಾಣಕ್ಕೆ ಅವಕಾಶ ಒದಗಿ ಬರಲಿದೆ ಎಂದು ಹೇಳಿತ್ತು. ದೇವರ ಭವಿಷ್ಯದಂತೆ ವರ್ಷದ ಒಳಗಾಗಿ ಮಂದಿರದ ಶಿಲಾನ್ಯಾಸ ನೆರವೇರಿತು. ಇದೀಗ, ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಾಣಗೊಂಡು ಲೋಕಾರ್ಪಣೆಗೆ ಸಜ್ಜುಗೊಂಡಿದೆ. ಸರ್ಕಾರ ಅಯೋಧ್ಯೆಯನ್ನು ಅಭಿವೃದ್ಧಿ ಮಾಡಿದಂತೆ, ರಾಮನು ಬಂದು ಹೋಗಿರುವ ದಶರಥ ರಾಮೇಶ್ವರ ಪುಣ್ಯಕ್ಷೇತ್ರವನ್ನು ಅಭಿವೃದ್ಧಿ ಮಾಡಬೇಕು.

» **ಏನ್.ಕೆ. ರವಿಕುಮಾರ್ ಸಂಚಾಲಕರು, ದಶರಥ ರಾಮೇಶ್ವರ ಕ್ಷೇತ್ರದ ಅಭಿವೃದ್ಧಿ ಸಮಿತಿ.**

# ಸಾಮೂಹಿಕ ಅತ್ಯಾಚಾರ ಪ್ರಕರಣದಲ್ಲಿ ಯಾರನ್ನೂ ರಕ್ಷಿಸುವ ಪ್ರಶ್ನೆಯೇ ಇಲ್ಲ: ಸಿಎಂ ಸಿದ್ದರಾಮಯ್ಯ

» **ಹಾವೇರಿ**

ಕಾನೂನನ್ನು ಯಾರೇ ಕೈಗೆ ತೆಗೆದುಕೊಂಡರೆ ಶಿಕ್ಷೆ ಕೊಡಿಸುವ ಪ್ರಯತ್ನ ಮಾಡುತ್ತೇವೆ. ಯಾರನ್ನೂ ರಕ್ಷಿಸುವ ಪ್ರಯತ್ನ ಮಾಡುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಅವರು ಇಂದು ಹಾವೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

**ಸಾಮೂಹಿಕ ಅತ್ಯಾಚಾರ ಪ್ರಕರಣ: ಅರ್ಜಿ ಪರಿಗಣಿಸಲಾಗುವುದು:** ಘಟನೆ ನಡೆದು ಒಂದು ತಿಂಗಳು ಆದರೂ ಸರ್ಕಾರದ ಪರವಾಗಿ ಯಾರೂ ಸಾಂತ್ವನ ಹೇಳಿಲ್ಲ ಏನೆಂಬ ಪ್ರಶ್ನೆಗೆ ಉತ್ತರಿಗೆ ಈಗ ತಾನೇ ಅರ್ಜಿ ಕೊಟ್ಟಿದ್ದಾರೆ ಅದನ್ನು ಪರಿಗಣಿಸಲಾಗುವುದು ಎಂದರು.

ಸಾಮೂಹಿಕ ಅತ್ಯಾಚಾರ ಪ್ರಕರಣದಲ್ಲಿ ಆರೋಪಿಗಳನ್ನು ಬಂಧಿಸಿದ್ದು ತನಿಖೆ ನಡೆಯುತ್ತಿದೆ. ನಮ್ಮ ಸರ್ಕಾರದಲ್ಲಿ ಯಾರನ್ನೂ ಕಾನೂನು ಕೈಗೆತೆಗೆದುಕೊಳ್ಳಲು ಬಿಡುವುದಿಲ್ಲ. ಕಾನೂನಿನ ಪ್ರಕಾರ ಕ್ರಮ ಜರುಗಿಸುವ ಕೆಲಸ ಮಾಡುತ್ತೇವೆ ಎಂದು ಮುಖ್ಯಮಂತ್ರಿ ಗಳು ತಿಳಿಸಿದರು.

ಉಳಿದಂತೆ ನೈತಿಕ ಪೊಲೀಸ್ ಗಿರಿ ಬಗ್ಗೆ ಮಾತನಾಡುತ್ತಾರೆ ಅತ್ಯಾಚಾರ ಪ್ರಕರಣದ ಬಗ್ಗೆ ಮಾತನಾಡಿಲ್ಲ ಎಂಬ ಆರೋಪಕ್ಕೆ ಪ್ರತಿಕ್ರಿಯೆ ನೀಡಿ ಮಾತನಾಡಿದರೆ ಮಾತ್ರ



ಕ್ರಮ ಇಲ್ಲದಿದ್ದರೆ ಇಲ್ಲವೇ ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು ಮಾತನಾಡದೇ ಕ್ರಮ ತೆಗೆದುಕೊಳ್ಳಲು ಸಾಧ್ಯವಿಲ್ಲವೇ ಎಂದರು.

**ಪ್ರಾಥಮಿಕ ವರದಿ ಬಂದ ನಂತರ ತೀರ್ಮಾನ:** ಪ್ರಕರಣವನ್ನು ಎಸ್.ಐ.ಟಿಗೆ ವಹಿಸಲು ಬಿಜೆಪಿ ಆಗ್ರಹ ಮಾಡುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಎಸ್.ಐ.ಟಿ ನಲ್ಲಿರುವವವರೂ ಪೊಲೀಸರೇ ಎಂದರು. ಪ್ರಕರಣದ ತನಿಖೆ ನಡೆಯುತ್ತಿದ್ದು, ಪ್ರಾಥಮಿಕ ವರದಿ ಬಂದ ನಂತರ ತೀರ್ಮಾನಿಸಲಾಗುವುದು ಎಂದರು. ಪ್ರಕರಣ ಮುಚ್ಚಿಹಾಕುವ ಪ್ರಯತ್ನ ನಡೆದಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಹೇಳಿಕೆಗೆ ಪ್ರತಿಕ್ರಿಯೆ ನೀಡಿ ಪ್ರಕರಣ ಮುಚ್ಚಿಹಾಕವ ಪ್ರಶ್ನೆಯೇ ಇಲ್ಲ ಎಂದರು. ತಪ್ಪು ಮಾಡಿದವರ ಮೇಲೆ ಕ್ರಮ ವಹಿಸಲಾಗುವುದು. ಅರ್ಜಿಯನ್ನು ಪರಿಶೀಲನೆ ಮಾಡಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು ಎಂದರು.

ಬೆಳಗಾವಿ ಜಿಲ್ಲೆಯ ಪ್ರಕರಣದಲ್ಲಿ ಮಾತ್ರ ತಕ್ಷಣ ಭೇಟಿ ನೀಡಿ ಪರಿಹಾರ ನೀಡಿದಿರಿ ಎಂಬ ಪ್ರಶ್ನೆಗೆ ಅಲ್ಲಿಗೆ ಗೃಹ ಸಚಿವರು ಭೇಟಿ ನೀಡಿದ್ದರು. ಭೇಟಿ ನೀಡುವಂತೆ ನಾನೇ ಸೂಚನೆ ನೀಡಿದ್ದೆ. ಇಲ್ಲಿ ಗೃಹ ಸಚಿವರು ಇರಲಿಲ್ಲ. ಕೇಂದ್ರದ ಮಾಜಿ ಸಚಿವ ಶಿವಣ್ಣ ಭೇಟಿ ನೀಡಿದ್ದಾರೆ ಎಂದರು. ಸಂತ್ರಸ್ತೆ ಯನ್ನು ಭೇಟಿ ಮಾಡಿ ಬರುವುದು ಸಾಂತ್ವನ ಹೇಳುವುದು ಒಂದು ಭಾಗವಾದರೆ ಕಾನೂನಿನ ರೀತಿ ಕ್ರಮ ತೆಗೆದುಕೊಳ್ಳುವುದು ಮತ್ತೊಂದು ಭಾಗ ಎಂದರು.

**ಸರಿಪಡಿಸುವ ಕ್ರಮಕೈಗೊಳ್ಳಲಾಗುವುದು:** ಸಂತ್ರಸ್ತೆಗೆ ಚಿಕಿತ್ಸೆ ನೀಡದೇ ಆರೋಪಿಗೆ ಪೊಲೀಸರು ಚಿಕಿತ್ಸೆ ನೀಡುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಈ ಬಗ್ಗೆ ಶಿವಣ್ಣ ಅವರೊಂದಿಗೆ ಮಾತನಾಡಿ ಸರಿಪಡಿಸುವ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ಎಂದರು.

**ಫೆಬ್ರವರಿ ತಿಂಗಳಲ್ಲಿಯೇ ಬಜೆಟ್ ಮಂಡನೆ:** ಮಾರ್ಚ್ ಮೊದಲ ವಾರದೊಳಗೆ ಚುನಾವಣಾ ನೀತಿ ಸಂಹಿತೆ ಘೋಷಣೆಯಾಗುವುದರಿಂದ ಫೆಬ್ರವರಿ ತಿಂಗಳಲ್ಲಿಯೇ ಬಜೆಟ್ ಮಂಡಿಸಲಾಗುವುದು ಎಂದರು.

**ಕೇಂದ್ರ ಸರ್ಕಾರದಿಂದ ಪರಿಹಾರ ಬಂದ ನಂತರ ರೈತರಿಗೆ ಪುನಃ ಪರಿಹಾರ:** ರೈತರರಿಗೆ ಪರಿಹಾರ ನೀಡಿಲ್ಲವೆಂದು ಪ್ರತಿಭಟನೆ ಮಾಡುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ರೈತರಿಗೆ 2000 ರೂ.ಗಳ ತಾತ್ಕಾಲಿಕ ಪರಿಹಾರವನ್ನು ನೀಡುತ್ತಿದ್ದು ಕೇಂದ್ರ ಸರ್ಕಾರದಿಂದ ಪರಿಹಾರ ಬಂದ ನಂತರ ಪುನಃ ಎನ್.ಡಿ.ಆರ್.ಎಫ್ ನಿಯಮಾವಳಿ ಗಳ ಪ್ರಕಾರ ಪರಿಹಾರ ನೀಡಲಾಗುವುದು ಎಂದರು.

**ಮನುಷ್ಯತ್ವ ಇರಬೇಕು:**ಅನಂತಕುಮಾರ್ ಹೆಗಡೆಯವರು ಏಕವಚನದಲ್ಲಿ ಮಾತನಾಡುವುದನ್ನು ಕಲಿಸಿದ್ದೇ ಸಿದ್ದರಾಮಯ್ಯ ಅವರು ಎಂದು ಸಮರ್ಥಿಸಿಕೊಂಡಿದ್ದಾರೆ ಎಂಬ ಬಗ್ಗೆ ಪ್ರತಿಕ್ರಿಯೆ ನೀಡಿ ಅವರು ರಾಜಕೀಯವಾಗಿ ಆರೋಪ ಮಾಡುತ್ತಾರೆ. ಅನಂತ ಕುಮಾರ್ ಹೆಗಡೆ ಅವರು ಇವತ್ತಿನವರೆಗೆ ನಾಪತ್ತೆಯಾಗಿದ್ದರು. ಚುನಾವಣೆ ಹತ್ತಿರ ಬಂದಂತೆ ಕಾಣಿಸಿಕೊಂಡು ಹೇಳಿಕೆ ನೀಡಿದ್ದಾರೆ. ಸಂಸದರಾಗಿ ಮಾಜಿ ಮಂತ್ರಿಯಾಗಿ ಕ್ಷೇತ್ರ ಕ್ಕೆ ಏನಾದರೂ ಮಾಡಿದ್ದಾರೆಯೇ ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು ಇಂದಿನವರೆಗೆ ಬಡವರ ಸಮಸ್ಯೆ ಕೇಳಿದ್ದಾರೆಯೇ? ಸಂಸ್ಕೃತಿ ಎಂದರೆ ಮನುಷ್ಯತ್ವ. ಮೊದಲು ಮನುಷ್ಯ ತ್ವ ಇರಬೇಕು ಎಂದರು.

# ಸಂಸದ ಅನಂತ್ ಕುಮಾರ್ ಹೆಗ್ಡೆ ಅವನೊಬ್ಬ ಹುಚ್ಚ: ಆಂಜನೇಯ

» **ಚಿತ್ರದುರ್ಗ**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಟೀಕಿಸಿರುವ ಬಿಜೆಪಿ ಸಂಸದ ಅನಂತ್ ಕುಮಾರ್ ಹೆಗ್ಡೆ ಅವನೊಬ್ಬ ಹುಚ್ಚ ಎಂದು ಮಾಜಿ ಸಚಿವ ಹೆಚ್ ಆಂಜನೇಯ ಚಿತ್ರದುರ್ಗದಲ್ಲಿ ಕಿಡಿಕಾರಿದರು.

ಚಿತ್ರದುರ್ಗ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅನಂತ್ ಕುಮಾರ್ ಹೆಗ್ಡೆ ಹೇಳಿಕೆಗೆ ತಿರುಗೇಟು ನೀಡಿದ್ದಾರೆ. ಮಾಜಿ ಸಚಿವರು ಹುಚ್ಚರ ಬಗ್ಗೆ ಯಾರಾದರೂ ಮಾತನಾಡುತ್ತಾರಾ ಎಂದು ಪ್ರಶ್ನಿಸಿ, ಹುಚ್ಚನಂತೆ ರೀತಿಯಲ್ಲಿ ವರ್ತನೆ ಮಾಡುತ್ತಾನೆ. ನಾವು ಆ ರೀತಿ ಅಲ್ಲ, ನಾನು ಸಹ ಏಕವಚನ ಬಳಸಬಾರದು. ಆದರೆ ಅವನಿಗೆ ಯಾವ ಭಾಷೆ ಬಳಸಿದರೂ ಕೂಡ ಸಾಲದು ಎಂದು ಆಕ್ರೋಶ ಹೊರಹಾಕಿದರು.


ನಮ್ಮ ನಾಡಿನ ದೊರೆ ಮುಖ್ಯಮಂತ್ರಿ ಸಿದ್ದರಾಮಯ್ಯ. ರಾಮರಾಜ್ಯದ ಕನಸು ಅನಾವರಣ ಮಾಡಿ ಕಾರ್ಯರೂಪಕ್ಕೆ ತಂದವರು. ಜನ ಮೆಚ್ಚಿದ ಸಿದ್ದರಾಮಯ್ಯ ಬಗ್ಗೆ ಹಗುರವಾಗಿ ಮಾತಾಡ್ತಾನಲ್ಲ, ಅವನು ಮನುಷ್ಯನಾ ಎಂದು ಅನಂತ್ ಕುಮಾರ್ ಹೆಗಡೆ ವಿರುದ್ಧ ಕಿಡಿಕಾರಿದರು.





ಮುನಿಸ್ವಾಮಿ ವಿರುದ್ಧ ವಾಗ್ದಾಳಿ: ಕಾಂಗ್ರೆಸ್ ಸರ್ಕಾರ ಹಿಂಧೂ ಧರ್ಮ, ಶ್ರೀರಾಮನ ವಿರೋಧಿ ಎಂಬ ಬಿಜೆಪಿ ಸಂಸದ ಮುನಿಸ್ವಾಮಿ ಹೇಳಿಕೆಗೆ ಪ್ರತಿಕ್ರಿಯೆ ನೀಡಿ, ಬಹಳಷ್ಟು ಜನ ಹಿಂದೂಗಳಿರುವುದೇ ಕಾಂಗ್ರೆಸ್ ಪಕ್ಷದಲ್ಲಿ. ಹಿಂದೂ ಧರ್ಮ, ರಾಮನ ಪೂಜೆ ಮಾಡುವವರು ಹೆಚ್ಚಿರುವುದು ಕಾಂಗ್ರೆಸ್ ಪಕ್ಷದಲ್ಲಿ. ರಾಮನ ಹೆಸರಿನಲ್ಲಿ ಮತಕ್ಕಾಗಿ ಮಾರ್ಕೆಟಿಂಗ್ ಮಾಡುವವರು ಕಾಂಗ್ರೆಸ್ಸಿಗರಲ್ಲ ಎಂದರು.

ಕೋಟ್ಯಾಂತರ ಕಾಂಗ್ರೆಸ್ಸಿಗರ ಹೃದಯದಲ್ಲಿ ರಾಮನಿದ್ದಾನೆ. ಆಂಜನೇಯನ ಹೃದಯದಲ್ಲಿ ರಾಮನಿದ್ದಂತೆ ಕಾಂಗ್ರೆಸ್ಸಿಗರ ಹೃದಯದಲ್ಲಿ ರಾಮ. ನಾವು ರಾಮನ ವಿರೋಧಿ ಅಲ್ಲ, ಹಿಂದೂಗಳ ವಿರೋಧಿ ಅಲ್ಲ. ಹಿಂದೂಗಳ ಪರ, ಮುಸ್ಲಿಂರ ಪರ ಎಲ್ಲಾ ಧರ್ಮಗಳ ಜನರ ಪರವಿದ್ದೇವೆ ಎಂದು ಮಾಜಿ ಸಚಿವ ಆಂಜನೇಯ ಹೇಳಿದ್ದಾರೆ.








ಮಕರ ಸಂಕ್ರಾಂತಿ ಪ್ರಯುಕ್ತ ವಿವಿಧ ಅಲಂಕಾರದಲ್ಲಿ ಭಕ್ತರಿಗೆ ದರ್ಶನ ನೀಡಿದ ಕೋಟೆನಾಡು ಚಿತ್ರದುರ್ಗದ ದೇವತೆಗಳು.

## ಫಾಸ್ಟ್ ನ್ಯೂಸ್

### ರಾಮಚಂದ್ರ ಪ್ರಕರಣ ವಜಾಕ್ಕೆ ದಸಂಸ ಮುಖಂಡರು ಒತ್ತಾಯ

» ತರೀಕೆರೆ

ದಸಂಸ ತಾಲ್ಲೂಕು ಪ್ರಧಾನ ಸಂಚಾಲಕ ರಾಮಚಂದ್ರರವರ ಮೇಲೆ ದಾಖಲಿಸಿ ರುವ ಸುಳ್ಳು ಪ್ರಕರಣವನ್ನು ವಜಾಗೊಳಿಸಬೇಕು ಎಂದು ಒತ್ತಾಯಿಸಿ ದಸಂಸ (ಅಂಬೇಡ್ಕರ್ ವಾದ) ಪದಾಧಿಕಾರಿ ಗಳು ಪೊಲೀಸ್ ಉಪಾಧ್ಯಕ್ಷಕರ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ಈ ಕುರಿತು ದಸಂಸ ಜಿಲ್ಲಾ ಪ್ರಧಾನ ಸಂಚಾಲಕ ಮರ್ಲೆ ಅಣ್ಣಯ್ಯ ಮಾತನಾಡಿ ತರೀಕೆರೆ ದಸಂಸ ಸಂಚಾ ಲಕ ಜೆ.ರಾಮಚಂದ್ರ ವಿರುದ್ಧ ವಿನಾಕಾರಣ ಐಪಿಸಿ 307 ಕಾಯಿದೆಯಡಿ ಸುಳ್ಳು ಪ್ರಕರಣ ದಾಖಸಿರುವುದು ಸರಿ ಯಲ್ಲ. ಕೂಡಲೇ ಪ್ರಕರಣವನ್ನು ವಜಾಗೊಳಿಸಬೇಕು ಎಂದರು. ಚುನಾವಣಾ ದುರುದ್ದೇಶವನ್ನಿಟ್ಟುಕೊಂಡು ರಾಮೇಗೌಡ ಎಂಬುವವರು ಕುಟುಂಬದವರನ್ನು ಎತ್ತಿಕಟ್ಟಿ ಜಗಳ ಮಾಡಿಸಲಾಗಿದೆ. ಇದನ್ನು ತಡೆಯೊಡ್ಡುವ ಸಲುವಾಗಿ ರಾಮಚಂದ್ರರವರು ಆಯುಧವನ್ನು ಕಿತ್ತುಕೊಂಡು ಜೀವ ರಕ್ಷಣೆಗೆ ಮುಂದಾಗಿದ್ದಾರೆ ಎಂದು ಹೇಳಿದರು.ಇದನ್ನೇ ಬಂಡವಾಳ ಮಾಡಿಕೊಂಡು ರಾಮೇಗೌಡ ಎಂಬುವವರು ದಸಂಸ ಸಂಚಾಲಕರ ವಿರುದ್ಧವೇ ಸುಳ್ಳು ಪ್ರಕರಣ ದಾಖಲಿಸಿರುವುದು ಖಂಡನೀಯ. ಕೂಡಲೇ ಪ್ರಕರಣವನ್ನು ಕೈಬಿಟ್ಟು ತಪ್ಪಿತಸ್ಥರ ರಾಮೇಗೌಡರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.ಈ ಸಂದರ್ಭದಲ್ಲಿ ದಸಂಸ ಜಿಲ್ಲಾ ಸಂಘಟನಾ ಸಂಚಾಲಕ ಎಸ್.ಎನ್. ಮಹೇಂದ್ರಸ್ವಾಮಿ, ತರೀಕೆರೆ ಪ್ರಧಾನ ಸಂಚಾಲಕ ಹೆಚ್.ಎಸ್.ರಾಜಪ್ಪ, ಪ್ರಧಾನ ಸಂಚಾಲಕ ಜಿ.ಎಸ್.ನಾಗರಾಜ್, ಮುಖಂಡರುಗಳಾದ ಎಸ್. ಹೆಚ್. ಶಿವಣ್ಣ ಹೆಬ್ಬೂರು, ರಮೇಶ್, ಅಣ್ಣಯ್ಯ ಮತ್ತಿತರರು ಹಾಜರಿದ್ದರು.

### ಬಿಟ್ಟೇನಹಳ್ಳಿ : ಹಾಲು ಉತ್ಪಾದಕರ ಸಂಘಕ್ಕೆ ಅಜಯ್ ಅಧ್ಯಕ್ಷ

» ಕಡೂರು

ತಾಲ್ಲೂಕಿನ ಪಂಚನಹಳ್ಳಿ ಹೋಬಳಿಯ ಬಿಟ್ಟೇನಹಳ್ಳಿ ಗ್ರಾಮದ ಹಾಲು ಉತ್ಪಾಕರ ಸಂಘದ ಅಧ್ಯಕ್ಷರಾಗಿ ಬಿ.ಇ.ಅಜಯ್ ಹಾಗೂ ಉಪಾಧ್ಯಕ್ಷರಾಗಿ ಪೋಟಿ ರಾಮಣ್ಣ ಅವಿರೋಧ ಆಯ್ಕೆಯಾದರು.\ ಸಂಘದ ಸಭಾಂಗಣದಲ್ಲಿ ನಡೆದ ಅಧ್ಯಕ್ಷ–ಉಪಾಧ್ಯಕ್ಷ ಆಯ್ಕೆ ಸಂಬಂಧ ಅಜಯ್ ಮತ್ತು ರಾಮಣ್ಣ ಹೊರತುಪಡಿಸಿ ಬೇರ್‍ಯಾವ ನಾಮಪತ್ರ ಸಲ್ಲಿಕೆಯಾಗದ ಹಿನ್ನೆಲೆಯಲ್ಲಿ ಮುಂದಿನ ಅವಧಿಗೆ ಚುನಾವಣಾಧಿಕಾರಿ ಅನುಪಮ ಅವಿರೋಧ ಆಯ್ಕೆಯನ್ನು ಈಚೆಗೆ ಘೋಷಿಸಿದರು. ಈ ಸಂದರ್ಭದಲ್ಲಿ ಕೆಎಂಎಫ್ ನಿರ್ದೇಶಕ ಟಿ.ಕೆ.ಜಗದೀಶ್, ಮಾಜಿ ನಿರ್ದೇಶಕ ಎಸ್.ಡಿ.ರಾಮಪ್ಪ, ನಿಕಟ ಪೂರ್ವ ಅಧ್ಯಕ್ಷೆ ಚಂದ್ರಮ್ಮ, ನಿರ್ದೇಶಕರುಗಳಾದ ಬಿ.ಬಿ.ಕಿರಣ್, ಬಿ.ವಿ.ಮಂಜುನಾಥ್, ಬಿ.ಎಸ್.ದಯಾನಂದ್, ಬಿ.ಎಂ.ಈಶ್ವರಪ್ಪ, ಮಲ್ಲಿಕಾರ್ಜುನ, ಕಾರ್ಯದರ್ಶಿ ವಿಜಯ್ ಕುಮಾರ್ ಮುಖಂಡರುಗಳಾದ ರಮೇಶ್ ನಾರಿನಿಂಗಜ್ಜಿ,ಬಿ.ಬಿ.ಮರಳಪ್ಪ,ಬಿ.ಬಿ.ರಾಜಶೇಖರ್, ಬಿ.ಆರ್. ಲೋಕೇ ಶ್, ಶಾಂತಕುಮಾರ್, ಪ್ರೇಮ್‌ಕುಮಾರ್ ಉಪಸ್ಥಿತರಿದ್ದರು.

### ಅಲ್ಲಮಪ್ರಭು ಹೆಸರು ಘೋಷಣೆಗೆ ಸ್ವಾಗತ

» ಶಿವಮೊಗ್ಗ

ಕಾಂಗ್ರೆಸ್ ಸರ್ಕಾರದ ಐದನೇ ಗ್ಯಾರಂಟಿ ಯುವನಿ ಲೋಕಾರ್ಪಣೆಯನ್ನು ಶಿವಮೊಗ್ಗದಲ್ಲಿ ಯಶಸ್ವಿಯಾಗಿ ಮಾಡಿರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಂತ್ರಿಮಂಡಲದ ಸಚಿವರಿಗೆ ಮಾಜಿ ಶಾಸಕ ಹೆಚ್.ಎಂ. ಚಂದ್ರಶೇಖರಪ್ಪ ಅಭಿನಂದಿಸಿದ್ದಾರೆ. ಅಲ್ಲದೇ ಫ್ರೀಡಂ ಪಾರ್ಕ್‌ಗೆ 12ನೇ ಶತಮಾನದ ಅನುಭವ ಮಂಟಪದ ಅಧ್ಯಕ್ಷರಾಗಿದ್ದ ಅಲ್ಲಮಪ್ರಭು ಹೆಸರಿಡಲು ಮುಖ್ಯಮಂತ್ರಿಗಳು ಘೋಷಣೆ ಮಾಡಿರುವುದಕ್ಕೆ ಸ್ವಾಗತಿಸಿದ್ದಾರೆ.

# ಬಿಜೆಪಿ ಜಿಲ್ಲಾಧ್ಯಕ್ಷರಾಗಿ ಮುರಳಿ ಪುನರ್ ಆಯ್ಕೆ



» ಚಿತ್ರದುರ್ಗ

ಬಿಜೆಪಿ. ಜಿಲ್ಲಾಧ್ಯಕ್ಷರಾಗಿ ಎರಡನೆ ಬಾರಿಗೆ ಮರು ನೇಮಕವಾಗಿರುವ ಎ.ಮುರಳಿರವರಿಗೆ ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಪಕ್ಷದ ಕಚೇರಿಯಲ್ಲಿ ಶಾಲು ಹೊದಿಸಿ ಅಭಿನಂದಿಸಿದರು. ಎ.ಮುರಳಿರವರನ್ನು ಅಭಿನಂದಿಸಿ ಮಾತನಾಡಿದ ಕೆ.ಎಸ್.ನವೀನ್ ರಾಜ್ಯದ ಹತ್ತು ಜಿಲ್ಲೆಗಳಲ್ಲಿ ಹಳಬರನ್ನೆ ಪಕ್ಷದ ಜಿಲ್ಲಾಧ್ಯಕ್ಷರನ್ನಾಗಿ ಪುನರ್ ಆಯ್ಕೆ ಮಾಡಿದೆ. ಕಳೆದ ಅವಧಿಯ ನಿಮ್ಮ ಸಾಧನೆ ಹಾಗೂ ಪಕ್ಷ ನಿಷ್ಠೆಯನ್ನು ಗುರುತಿಸಿ ನಾಯಕರು ನಿಮಗೆ ಎರಡನೆ ಬಾರಿಗೆ ಬಿಜೆಪಿ. ಜಿಲ್ಲಾಧ್ಯಕ್ಷರ ಹುದ್ದೆ ನೀಡಿದ್ದಾರೆ. ಪಾರ್ಲಿಮೆಂಟ್ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸಬೇಕಾಗಿರುವುದರಿಂದ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷ ಸಂಘಟನೆಯಲ್ಲಿ ತೊಡಗುವಂತೆ ಹಾರೈಸಿದರು.2 ಬಾರಿಗೆ ನನ್ನನ್ನು ಬಿಜೆಪಿ.ಜಿಲ್ಲಾಧ್ಯಕ್ಷರನ್ನಾಗಿ ನೇಮಕ ಮಾಡಿರುವ ಪಕ್ಷದವರಿಷ್ಠರುನನ್ನಮೇಲೆವಿಶ್ವಾಸವಿಟ್ಟಿರುವುದನ್ನು ಉಳಿಸಿಕೊಂಡು ಪಕ್ಷದಲ್ಲಿ ಪ್ರಾಮಾಣಿಕವಾಗಿ ಸೇವೆ ಮಾಡುವುದಾಗಿ ನುಡಿದರು.ಮಧುಗಿರಿ ಬಿಜೆಪಿ. ನೂತನ ಜಿಲ್ಲಾಧ್ಯಕ್ಷ ಹನುಮಂತೆಗೌಡ, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಸುರೇಶ್‌ಸಿದ್ದಾಪುರ, ಮಾಧುರಿ ಗಿರೀಶ್, ನರೇಂದ್ರ ಹೊನ್ನಾಳ್, ಸಂಪತ್‌ಕುಮಾರ್, ದಗ್ಗೆಶಿವಪ್ರಕಾಶ್, ನಾಗರಾಜ್ ಬೇದ್ರೆ, ಡಿ.ಕೆ. ಜಯಣ್ಣ, ಶಿವಣ್ಣಾಚಾರ್, ನವೀನ್ ಚಾಲುಕ್ಯ, ನಂದಿ ನಾಗರಾಜ್, ಶ್ಯಾಮಲ ಶಿವಪ್ರಕಾಶ್, ಕಿರಣ್ ಕುಮಾರ್, ವೀರೇಶ್‌ಜಾಲಿಕಟ್ಟೆ, ಪರಶುರಾಮ್, ಡಾ.ಮಂಜುನಾಥ್, ರಾಮರೆಡ್ಡಿ, ಭಾರ್ಗವಿ ದ್ರಾವಿಡ್, ಬಸಮ್ಮ, ಶಂಭು, ಯಶವಂತ್, ವಿರುಪಾಕ್ಷಿ, ಮನೋಜ್ ಈ ಸಂದರ್ಭದಲ್ಲಿ ಹಾಜರಿದ್ದು, ಮುರಳಿರವರಿಗೆ ಶುಭ ಹಾರೈಸಿದರು.



ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಡಾ.ಸೈಯದ್ ನಾಸೀರ್ ಹುಸೇನ್‌ರವರನ್ನು ನೇರಲಗುಂಟೆ ರಾಮಪ್ಪ ಭೇಟಿ ನೀಡಿ ಸೌಹಾರ್ದ ಚರ್ಚೆ ನಡೆಸಿದರು.



ಚಳ್ಳಕೆರೆ ನಗರದ ತ್ಯಾಗರಾಜನ ಚಿಗುರು ಈ–ಕಿಡ್ಸ್ ಪ್ರೀ ಸ್ಕೂಲ್‌ನಲ್ಲಿ ಶನಿವಾರ ಸಂಕ್ರಾಂತಿ ಹಬ್ಬದ ಹಿನ್ನೆಲೆಯಲ್ಲಿ ಏರ್ಪಡಿಸಿದ್ದ ರಂಗೋಲಿ ಸ್ಪರ್ಧೆ ಏರ್ಪಡಿಸಲಾಗಿತ್ತು.

## ಮಂಜುನಾಥ ವೈ.ಕಬ್ಬೂರು ನೇಮಕ

ದಾವಣಗೆರೆ: ದಲಿತ್ ಇಂಡಿಯನ್ ಛೇಂಬರ್ ಆಫ್ ಕಾಮರ್ಸ್ ಅಂಡ್ ಇಂಡಸ್ಟ್ರಿ (ಡಿಐಸಿಸಿಐ) ಜಿಲ್ಲಾ ಘಟಕದ ಅಧ್ಯಕ್ಷರನ್ನಾಗಿ ಮಂಜುನಾಥ ವೈ. ಕಬ್ಬೂರು ಇವರನ್ನು ಆಯ್ಕೆ ಮಾಡಲಾಗಿದೆ. ಇತ್ತೀಚಿಗೆ ದಾವಣಗೆರೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಉದ್ಯಮ ಕ್ಷೇತ್ರದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಹಾಗೂ ಸಮಾಜ ಸೇವೆಯಲ್ಲಿ ಗುರುತಿಸಿಕೊಂಡಿರುವ ಮಂಜುನಾಥ ವೈ. ಕಬ್ಬೂರು ಅವರನ್ನು ಗುರುತಿಸಿ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ. ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾಗಿರುವ ಮಂಜುನಾಥ್ ವೈ.ಕಬ್ಬೂರು ಅವರಿಗೆ ತಳವಾರ ನಾಗರಾಜ್, ಗೋಶಾಲೆ ಬಸವರಾಜ್, ಮಾಡಾಳ್ ಶಿವಕುಮಾರ್, ಹುಚ್ಚವ್ವನಹಳ್ಳಿ ಕಂಬರಾಜ್, ಹೊನ್ನೂರು ವಸಂತ್, ಗೋಶಾಲೆ ಸುರೇಶ್, ಹದಡಿ ಪಾಲಾಕ್ಷ, ಹಾಲವರ್ತಿ ಗಂಗಣ್ಣ, ಆವರಗೆರೆ ಪರಶುರಾಮ್ ಅಭಿನಂದನೆ ಸಲ್ಲಿಸಿದ್ದಾರೆ.

## ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ ಪಾದಯಾತ್ರೆಗೆ ಮೊಳಕಾಲ್ಮುರಲ್ಲಿ ಪೂರ್ವಭಾವಿ ಸಭೆ



» ಮೊಳಕಾಲ್ಮುರು

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಆಕಾಂಕ್ಷಿ ಅಭ್ಯರ್ಥಿಯಾದ ಡಾ.ಬಿ.ತಿಪ್ಪೇಸ್ವಾಮಿ ಮತ್ತು ಲಿಡ್ಕರ್ ಮಾಜಿ ಅಧ್ಯಕ್ಷರಾದ ಓ.ಶಂಕರ್ ಹಾನಗಲ್ ಪ್ರವಾಸಿ ಮಂದಿರದಲ್ಲಿ ಪಾದಯಾತ್ರೆ ಪೂರ್ವಬಾವಿ ಸಭೆ ನಡೆಸಿ ತದನಂತರ ರಾಂಪುರಕ್ಕೆ ತೆರಳಿ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ಹಿರಿಯ ಶಾಸಕರಾದ ಶ್ರೀ ಎನ್.ವೈ.ಗೋಪಾಲಕೃಷ್ಣ ರವರನ್ನು ಬೇಟಿ ಮಾಡಿ ಸಂಕ್ರಾಂತಿ ಶುಭಾಶಯಗಳನ್ನು ಕೋರಿ, ಕ್ಷೇತ್ರದಲ್ಲಿ ಪ್ರಾರಂಭ ಆಗುವ ಪಾದಯಾತ್ರೆಯ ಪೂರ್ವ ತಯಾರಿ ಬಗ್ಗೆ ಸಮಾಲೋಚನೆ ನಡೆಸಲಾಯಿತು. ಈ ಸಂದರ್ಭದಲ್ಲಿ ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚೌಳೂರು ಪ್ರಕಾಶ್,ತುರುವನೂರು ಮಾಜಿ ಗ್ರಾ.ಪಂ.ಅಧ್ಯಕ್ಷರಾದ ಡಿ.ಆರ್.ಮಂಜುನಾಥ್. ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ಮುಖಂಡರಾದ ಕೊಂಡಾಪುರ ಪರಮೇಶ್ವರಪ್ಪ, ಕಾಡಪ್ಪರಾಂಪುರ.ದಡಗೂರು ಗಂಗಾಧರ್,ಮಹಾದೇವ, ಕೃಷ್ಣಮೂರ್ತಿ, ವಡೇರಹಳ್ಳಿ ಬಸವರಾಜ, ತಿಪ್ಪೇಸ್ವಾಮಿ ತಮ್ಮೇನಹಳ್ಳಿ, ಬಸವರಾಜ,ಆನಂದ್, ರಮೇಶ್ ,ದ್ಯಾವರನಹಳ್ಳಿ ತಿಪ್ಪೇಸ್ವಾಮಿ. ರಾಜಶೇಖರ್ ಇತರರು ಭಾಗವಹಿಸಿದ್ದರು.

## ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಹೆಚ್ಚು ಒತ್ತು ನೀಡಿ: ಮಂಜುನಾಥ ಬಾಬು



» ಚಳ್ಳಕೆರೆ

ಶಾಲಾ ಹಂತದಲ್ಲಿಯೇ ಮಕ್ಕಳಿಗೆ ವಿವಿಧ ಕಾರ್ಯಗಳನ್ನು ಆಯೋಜಿಸುವ ಮೂಲಕ ಅವರ ಶೈಕ್ಷಣಿಕ ಬೆಳವಣಿಗೆಗೆ ಪೂರಕವಾದ ವಾತಾವರಣವನ್ನು ನಿರ್ಮಾಣ ಮಾಡಬೇಕು. ಮೈ ಚೋಟಾ ಸ್ಕೂಲ್ ಆಡಳಿತ ಮಂಡಳಿ ಮಕ್ಕಳ ಬೆಳವಣಿಗೆಗೆ ಹೆಚ್ಚು ಒತ್ತು ನೀಡುತ್ತಿರುವುದು ಸಂತಸ ತಂದಿದೆ ಎಂದು ಮಕ್ಕಳ ತಜ್ಞ ಡಾ.ಮಂಜುನಾಥ ಬಾಬು ತಿಳಿಸಿದರು. ಅವರು, ತ್ಯಾಗರಾಜನಗರದಲ್ಲಿರುವ ಮೈಚೋಟಾ ಸ್ಕೂಲ್‌ನ ಮೊದಲನೆ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಜ್ಯೋತಿಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಮಕ್ಕಳಿಗೆ ಎಲ್ಲಾ ರೀತಿಯಲ್ಲಿ ಶಿಕ್ಷಣವನ್ನು ನೀಡಬೇಕಿದೆ. ಚಿಕ್ಕಮಕ್ಕಳು ಸಾಮಾನ್ಯವಾಗಿ ಕಲಿಕೆಯಲ್ಲಿ ಆಸಕ್ತಿ ವಹಿಸುವುದು ಕಡಿಮೆ ಇಂತಹ ಸಂದರ್ಭದಲ್ಲಿ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಮಕ್ಕಳ ಜ್ಞಾನವೃದ್ಧಿಗೆ ಶ್ರಮಿಸಬೇಕೆಂದು ತಿಳಿಸಿದರು.

## ಪ್ರಮುಖ ಸುದ್ದಿ

# ಕಾಂಗ್ರೆಸ್ ಪಕ್ಷದಿಂದಲೇ ಲೋಕಸಭೆ ಚುನಾವಣೆಗೆ ಸ್ಪರ್ಧೆ

» ದಾವಣಗೆರೆ

ಪರಿಶ್ರಮ ಮತ್ತು ಕಾಯಕದ ಮೇಲೆ ದೃಢವಾದ ನಂಬಿಕೆ ನನ್ನದು. ಅಂಬೇಡ್ಕರ್ ಆಶಯದಂತೆ ಶಿಕ್ಷಣ, ಸಂಘರ್ಷ, ಹೋರಾಟ ನನ್ನ ಧ್ಯೇಚದರಯ ಎಂದು ಇನ್ಸೈಟ್ಸ್ ಐಎಎಸ್ ತರಬೇತಿ ಸಂಸ್ಥೆಯ ಸಂಸ್ಥಾಪಕರೂ, ನಿರ್ದೇಶಕ ಜಿ.ಬಿ.ವಿನಯ್ ಕುಮಾರ್ ಕಕ್ಕರಗೊಳ್ಳ ಹೇಳಿದರು.

ಚನ್ನಗಿರಿ ತಾಲೂಕಿನ ದೇವರಹಳ್ಳಿ, ಕಾಕನೂರು, ಸಂತೇಬೆನ್ನೂರು ಗ್ರಾಮಗಳಲ್ಲಿ ಪಾದಯಾತ್ರೆ ನಡೆಸಿ ನಂತರ ಸಂತೇಬೆನ್ನೂರು ಬಸ್ ನಿಲ್ದಾಣದಲ್ಲಿ ವಿನಯ್ ಕುಮಾರ್ ಅಭಿಮಾನಿ ಬಳಗದಿಂದ ಆಯೋಜನೆಗೊಂಡಿದ್ದ ಇನ್ಸೈಟ್ಸ್ ಸಂಸ್ಥೆಯ ದಶಮಾನೋತ್ಸವ ಸಮಾರಂಭದಲ್ಲಿ ಮಾತನಾಡಿದರು. ಲೋಕಸಭೆ ಚುನಾವಣೆಗೆ ಕಾಂಗ್ರೆಸ್ ಪಕ್ಷದಿಂದಲೇ ಸ್ಪರ್ಧಿಸುತ್ತೇನೆಯೇ ಹೊರತು ಪಕ್ಷೇತರರಾಗಿ ಸ್ಪರ್ದಿಸುವುದಿಲ್ಲ, ಇದು ನನ್ನ ದೃಢ ನಿಲುವು ಎಂದರು.

ಶ್ರಮ ಮತ್ತು ಕಾಯಕದ ಮೇಲೆ ನನಗೆ ಬಲವಾದ ನಂಬಿಕೆ ಇದೆ, ಪ್ರತಿಫಲ ದೇವರಿಗೆ ಬಿಟ್ಟಿದ್ದು, ಜಿಲ್ಲೆಯಲ್ಲಿ ಪಾದಯಾತ್ರೆ ಸಮಯದಲ್ಲಿ ಗ್ರಾಮೀಣ ಮಕ್ಕಳ ಶಿಕ್ಷಣದ



ಸ್ಥಿತಿಗತಿ, ನೀರು ನಿರ್ವಹಣೆ, ಬಡತನ, ನಿರುದ್ಯೋಗ, ರೈತರ ದೈನಂದಿನ ಸಮಸ್ಯೆಗಳನ್ನು ಅರಿತಿದ್ದೇನೆ ಮತ್ತು ಈ ಸಮಸ್ಯೆಗಳ ಪರಿಹಾರದ ಬಗ್ಗೆ ಚಿಂತನೆ ನಡೆಸಿದ್ದೇನೆ ಎಂದರು.

ಬರಗಾಲದಿಂದ ತತ್ತರಿಸಿರುವ ರೈತರು ಮತ್ತು ಜನರ ಸ್ಥಿತಿ–ಗತಿಗಳು ನೋಡಿದ್ದೇನೆ, ಇಂದು ಜನರು ದೇವರ ಮೊರೆಹೊಗುತ್ತಿರುವುದು ಕಾಣುತ್ತಿದೆ, ಹಾಲಿ ಸಂಸದರು ಬರಗಾಲ ಪರಿಸ್ಥಿತಿಯಲ್ಲಿಯು ಜನರ ಬಳಿ ಬಂದಿಲ್ಲ, ಜನರ ಸಮಸ್ಯೆ ಆಲಿಸಿಲ್ಲ ಎಂಬ ಮಾತು ಸಾರ್ವಜನಿಕ ವಾಗಿ ಕೇಳಿ ಬರುತ್ತಿದೆ. ಚುನಾವಣೆ ಬಂದಾಗ ಮಾತ್ರ ಪ್ರಜಾಪ್ರಭುತ್ವ, ಚುನಾವಣೆ ಮುಗಿದಾಗ ಜನರ ಸಮಸ್ಯೆಗಳಿಗೆ ಪ್ರಜಾಪ್ರಭುತ್ವ ಇರುವುದಿಲ್ಲ, ದುಡ್ಡಿನ ಜನರು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಕೈಯಲ್ಲಿ ಹಿಡಿಯಲು ಹಂಬಲಿಸುತ್ತಿದ್ದಾರೆ, ಇದಕ್ಕೆ ಜನರು ಪ್ರಜ್ಞಾವಂತರಾಗ ಬೇಕು ಎಂದು ಹಿತ ನುಡಿದರು.

ಶಿಕ್ಷಣ ಮೊದಲ ಅದ್ಯತೆ ನನ್ನದಾಗಿದೆ, ಕುಡಿಯಲು ನೀರು, ರೈತರಿಗೆ ನಿರಾವರಿ, ಯುವಕರಿಗೆ ಉದ್ಯೋಗಕ್ಕೆ ಅದ್ಯತೆ ನೀಡುತ್ತೇನೆ, ನಿಮ್ಮ ನಿರೀಕ್ಷೆಗಳನ್ನು ಈಡೇರಿಸಲು ಒಂದು ಅವಕಾಶ ನೀಡಿ ಎಂದು ಮನವಿ ಮಾಡಿದರು. ನಮ್ಮ ಇನ್‌ಸೈಟ್ ತರಬೇತಿ ಸಂಸ್ಥೆಗೆ 10 ವರ್ಷ ತುಂಬಿರುವುದು 450 ಜನರ ಶ್ರಮದಿಂದ ಸಾರ್ಥಕ ಯಶಸ್ಸನ್ನು ತಂದಿದೆ, ದೇಶದಲ್ಲಿಯೇ 3ನೇ ಸ್ಥಾನ ಹೊಂದಿದೆ, ಕಾಶ್ಮೀರದಲ್ಲಿ ಸ್ಥಾಪನೆಗೆ ನನ್ನ ಬಂಧು ಶರತ್ ಅವರ ಕೊಡುಗೆ ತುಂಬಾವಇದೆ ಎಂದು ಶ್ಲಾಘಿಸಿದರು.

ಗ್ರಾಮದ ಕಾಂಗ್ರೆಸ್ ಮುಖಂಡ ಎಂ.ಸಿದ್ದಪ್ಪ ಮಾತನಾಡಿ, ವಿನಯ್ ಕುಮಾರ್ ರವರು ಜಿಲ್ಲೆಯ ಜಗಳೂರು, ಹರಪನಹಳ್ಳಿ, ಹೊನ್ನಾಳಿ ತಾಲ್ಲೂಕುಗಳಲ್ಲಿ 540 ಕಿಮಿ ಪಾದಯಾತ್ರೆ ಮಾಡಿ ಜನರ ಸಮಸ್ಯೆ ಆಲಿಸಿ ಕಟ್ಟ ಕಡೆಯ ವ್ಯಕ್ತಿಯನ್ನು ಭೇಟಿ ಮಾಡಿದ್ದಾರೆ, ಇವರ ಶೈಕ್ಷಣಿಕ ಸೇವೆ, ಅಪಾರ ಸಾಮಾಜಿಕ ಕಾಳಜಿ, ಭವಿಷ್ಯದ ಕನಸು ಮತ್ತು ಹೋರಾಟವನ್ನು ಗಮನಿಸಿ ಲೋಕಸಭೆ ಟೀಕೆಟ್‌ನ್ನು ಸಿಎಂ ಸಿದ್ದರಾಮಯ್ಯ, ಉಪ ಮುಖ್ಯ ಮಂತ್ರಿ ಶಿವಕುಮಾರ್ ರವರು ಡಿ.ಕೆ ನೀಡಬೇಕು ಎಂದು ಕಾಂಗ್ರೆಸ್ ಕಾರ್ಯಕರ್ತರ ಪರವಾಗಿ ಒತ್ತಾಯಿಸಿದರು.

ಗ್ರಾಮದ ಉಮೇಶ್ ಮಾತನಾಡಿದರು. ಇನಸೈಟ್ಸ್ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕ ಎಸ್. ಶರತ್ ಕುಮಾರ್, ಇರ್ಫಾನ್, ಗೌಡ್ರುಸ್ವಾಮಿ, ಶೇರ್‌ಅಲಿ, ವಿಜಯ್ ಗುಜ್ಜರ್, ಬಾಲು, ರಘು ದೊಡ್ಮನಿ, ಸದ್ದಾಂ, ವಿಜಯ್, ಗೌರೀಪುರ ನಾಗರಾಜ್, ನಯಾಜ್, ರುದ್ರೇಶ್ ಇದ್ದರು.

# ಶೋಷಿತ ವರ್ಗ ಸಮಾವೇಶಕ್ಕೆ ಭೂಮಿಪೂಜೆ

■ ಚಿತ್ರದುರ್ಗ

ಎಲ್ಲಾ ಜಾತಿ, ಧರ್ಮದ ಶೋಷಿತರ ವರ್ಗದವರ ಸಮಾವೇಶ ಜ.28 ರಂದು ಚಿತ್ರದುರ್ಗದಲ್ಲಿ ನಡೆಯಲಿದ್ದು ಇದರಲ್ಲಿ ಶೋಷಿತರ ಪರವಾದ ವಿವಿಧ ರೀತಿಯ ಹಕ್ಕುಗಳನ್ನುಮಂಡಿಸಲಾಗುವುದು,ಇದನ್ನು ಮುಖ್ಯಮಂತ್ರಿಗಳು ಸಕಾರಗೊಳಿಸುತ್ತಾರೆ ಎಂದು ಮಾಜಿ ಸಚಿವ ಹೆಚ್.ಅಂಜನೇಯ ತಿಳಿಸಿದರು.

ಚಿತ್ರದುರ್ಗ ನಗರದ ಹೂರ ವಲಯದ ಮಾದಾರ ಚನ್ನಯ್ಯ ಗುರುಪೀಠದ ಪಕ್ಕದಲ್ಲಿ ಜ. 28 ರಂದು ನಡೆಯಲಿರುವ ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟ ಆಯೋಜಿಸಿರುವ ಬೃಹತ್ ಜಾಗೃತಿ ಸಮಾವೇಶದ ವೇದಿಕೆ ಮತ್ತು ಪೆಂಡಾಲ್ ನಿರ್ಮಾಣ ಕಾರ್ಯಕ್ಕೆ ಬುದ್ಧ, ಬಸವ ಮತ್ತು ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ನಂತರ ಭೂಮಿ ಪೂಜೆ ನೇರವೇರಿಸಿ ಮಾತನಾಡಿದ ಅವರು, ಎಲ್ಲಾ ಜಾತಿಗಳಲ್ಲಿಯೂ ಸಹಾ ಶೋಷಿತರಿದ್ದಾರೆ, ಆರ್ಥಿಕವಾಗಿ, ಶೈಕ್ಷಣಿಕವಾಗಿ,ಸಾಮಾಜಿಕವಾಗಿಹಿಂದುಳಿದ ಎಲ್ಲರು ಸಹಾ ಶೋಷಿತರಾಗಿದ್ದಾರೆ. ಅವರ ಅಭಿವೃದ್ಧಿಗಾಗಿ ಈ ರೀತಿಯ ಸಮಾವೇಶಗಳ ಅಗತ್ಯವಿದೆ ಎಂದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಶೋಷಿತರು ಧಮನಿತರು, ಅವಕಾಶ ವಂಚಿತ ಸಮುದಾಯ ಹೆಚ್ಚಾಗಿದೆ. ಈ ಸಮಾವೇಶವನ್ನು ಮುಖ್ಯಸ್ಥರಾಗಿ ಸಂಘಟನೆಯನ್ನು ಒಕ್ಕೂಟದ ಅಧ್ಯಕ್ಷರಾದ ರಾಮಚಂದ್ರಪ್ಪ ಡಿ.ಎಸ್. ಎಸ್.ನ ಮುಖಂಡರಾದ ಮಾವಳ್ಳಿ ಶಂಕರ್ ಸೇರಿದಂತೆ ಹಲವಾರು ಜನತೆ ಇದರ ನಿರ್ಮಾಣಕ್ಕೆ ಮುಂದಾಗಿದ್ದು ಜನ ಸಂಘಟನೆಯನ್ನು ಮಾಡುತ್ತಿದ್ದಾರೆ ಎಂದು ಹೇಳಿದರು.ಶೋಷಿತರು ಇಂದು ಎಲ್ಲಾ ಜಾತಿಯಲ್ಲಿಯೂ ಸಹಾ ಇದ್ದಾರೆ. ಶೋಷಿತ ವರ್ಗಗಳನ್ನು ಒಂದು ಕಡೆಗೆ ಸೇರಿಸುವ ಕಾರ್ಯವನ್ನು ಈ ಸಮಾವೇಶ ಮಾಡುತ್ತದೆ. ಅವರ ಹಕ್ಕುಗಳನ್ನು ಕಾಪಾಡಿ ಅವರಿಗೆ ಸಿಗಬೇಕಾದ ನ್ಯಾಯಯುತವಾದ ಬೇಡಿಕೆಗಳನ್ನು ಈಡೇರಿಸುವ ಮೂಲಕ ಸಾಮಾಜಿಕ, ಶೈಕ್ಷಣಿಕ, ಆರ್ಥಿಕವಾಗಿ ಸಬಲರನ್ನಾಗಿ ಮಾಡುವ ಸಮಾವೇಶ ಇದಾಗಬೇಕಿದೆ ಎನ್ನುವುದು ನಮ್ಮ ಆಶಯವಾಗಿದೆ ಎಂದರು.



ನನ್ನ ಅಧಿಕಾರದ ಅವಧಿಯಲ್ಲಿ ಸಾಮಾಜಿಕ ಶೈಕ್ಷಣಿಕ ಸಮೀಕ್ಷಯಾಯಿತು, ಅದನ್ನು ಕಾಂತರಾಜ್ ರವರು ಮಾಡಿದರು. ಉತ್ತಮವಾದ ಮಾಹಿತಿಯನ್ನು ಹೊಂದಿದ ವರದಿಯಾಗಿದೆ. ಇದಕ್ಕಾಗಿ ಹಲವಾರು ಜನತೆ ಕೆಲಸವನ್ನು ಮಾಡಿದ್ದಾರೆ. ಈ ಅದನ್ನು ಜಾತಿ ಗಣತಿ ಎನ್ನುತ್ತಿದ್ದಾರೆ, ಇದು ವರದಿ ಸಿದ್ದವಾಗಿದೆ ಅದನ್ನು ಸ್ವೀಕಾರ ಮಾಡಿ ಅದರಲ್ಲಿ ನೀಡಿರುವ ಅಂಶಗಳನ್ನು ಮನಗಂಡು ಅವರಿಗೆ ತಲುಪಿಸುವ ಕಾರ್ಯವನ್ನು ಸರ್ಕಾರ ಮಾಡಬೇಕಿದೆ ಎಂದು ತಿಳಿಸಿದರು.

ಹಲವಾರು ಜಾತಿಗಳು ಸರ್ಕಾರದ ಸೌಲಭ್ಯಗಳನ್ನು ಪಡೆಯದೇ ಇರುವ ಜಾತಿಗಳು ಇವೆ ಅಂತಹರಿಗೆ ಸೌಲಭ್ಯ ಸಿಗುವಂತಾಗಬೇಕು ಅದಕ್ಕೆ ಈ ಕಾಂತರಾಜ ವರದಿ ಸಹಾಯವಾಗಲಿದೆ ಅದ್ದರಿಂದ ಈ ವರದಿಯನ್ನು ಸ್ವೀಕಾರ ಮಾಡಿ ಅದರ ಬಗ್ಗೆ ಚರ್ಚೆ ನಡೆದು ತಪ್ಪುಗಳಿದ್ದರೆ ಸರಿಪಡಿಸಿ ಸಣ್ಣ ಸಣ್ಣ ಜಾತಿಗಳಿಗೆ ಸರ್ಕಾರದ ಸೌಲಭ್ಯ ಸಿಗಬೇಕೆನ್ನುವುದು ಒಕ್ಕೂಟದ ಬೇಡಿಕೆಯಾಗಿದೆ ಎಂದರು.

ಸಮಾವೇಶದ ಸಂಚಾಲಕ ಬಿ.ಟಿ.ಜಗದೀಶ್ ಮಾತನಾಡಿ, ಸಮಾವೇಶವನ್ನು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಸಮಾವೇಶವನ್ನು ಉದ್ಘಾಟನೆ ಮಾಡಲಿದ್ದಾರೆ ಇವರ ಜೊತೆಯಲ್ಲಿ ಸರ್ಕಾರದ ಹಲವಾರು ಸಚಿವರು ಶೋಷಿತ ಸಮುದಾಯದ ನಾಯಕರು ಭಾಗವಹಿಸಲಿದ್ದಾರೆ. ಇದರಲ್ಲಿ ಸಿದ್ದರಾಮಯ್ಯರವರು ಶೋಷಿತ ಸಮುದಾಯಗಳಿಗೆ ಏನಾದರೂ ಕೂಡುಗೆಯನ್ನು ನೀಡುವ ನೀರೀಕ್ಷೆ ಇದೆ. ಇದರಲ್ಲಿ ರಾಜ್ಯದ ನಾನಾ ಭಾಗಗಳಿಂದ ಲಕ್ಷಾಂತರ ಜನತೆ ಭಾಗವಹಿಸಲಿದ್ದಾರೆ. ಸಮಾವೇಶ ಸಂಬಂಧ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಸಭೆಗಳನ್ನು ಮಾಡುವುದರ ಮೂಲಕ ಶೋಷಿತ ಸಮುದಾಯಗಳನ್ನು ಜಾಗೃತಿ ಮೂಡಿಸುವ ಕಾರ್ಯವನ್ನು ಮಾಡಲಾಗುತ್ತಿದೆ ಎಂದರು.

ಕಾಂಗ್ರೆಸ್ ಮುಖಂಡರಾದ ಹನುಮಲಿ ಷಣ್ಮುಖಪ್ಪ, ಮಾಜಿ ಶಾಸಕರಾದ ಡಿ.ಉಮಾಪತಿ. ಜಿ.ಪಂ.ಮಾಜಿ ಅಧ್ಯಕ್ಷರಾದ ಮಹಾಲಿಂಗಪ್ಪ, ಮಾಜಿ ಸದಸ್ಯರಾದ ನರಸಿಂಹಮೂರ್ತಿ, ರಾಜಾನಾಯ್ಕ, ಪ್ರಕಾಶಮೂರ್ತಿ, ಕೃಷ್ಣಮೂರ್ತಿ, ನಗರಸಭೆ ಮಾಜಿ ಅಧ್ಯಕ್ಷರಾದ ಸಿ.ಟಿ,.ಕೃಷ್ಣಮೂರ್ತಿ, ಹೆಚ್.ಮಂಜಪ್ಪ, ಟಿಪ್ಪು ವೇದಿಕೆಯ ಅಧ್ಯಕ್ಷರಾದ ಖಾಸಿಂಆಲಿ, ಬಡಗಿ ಕ್ಷೇಮಾಭೀವೃದ್ದಿ ಸಂಘದ ಅಧ್ಯಕ್ಷ ಜಾಕಿರ್ ಹುಸೇನ್, ಅಲೆಮಾರಿ ಜನಾಂಗದ ಅಧ್ಯಕ್ಷ ಲಕ್ಷ್ಮೀಕಾಂತ, ಮುಖಂಡರಾದ ರಾಮ ಪ್ರಕಾಶ್ ನಾಯ್ಕು, ಮುದಸಿರ್, ಷಫಿವುಲ್ಲಾ, ರೆಹಮಾನ್ ಖಾನ್, ಉಪ್ಪಾರ ಸಮಾಜದ ಮಾಜಿ ಅಧ್ಯಕ್ಷ ಮೂರ್ತಿ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಎಲ್ಲರಿಗೂ ಕೊಳ್ಳುವ ಶಕ್ತಿ ತುಂಬಲು ಸರ್ಕಾರ ಕಾರ್ಯಪ್ರವೃತ್ತವಾಗಿದೆ: ಸಿಎಂ ಸಿದ್ದರಾಮಯ್ಯ

» ಹಾವೇರಿ (ಚಿಕ್ಕ ಬಾಸುರ)

ಸಾರ್ವತ್ರಿಕ ಮೂಲ ಆದಾಯದ ತತ್ವದ ಆಧಾರದ ಮೇಲೆ ಎಲ್ಲರಿಗೂ ಕೊಳ್ಳುವ ಶಕ್ತಿ ಬರಬೇಕು ಎಂಬ ನಿಟ್ಟಿನಲ್ಲಿ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಶ್ರೀ ನೊಳಂಬ ಲಿಂಗಾಯತ ಸಂಘ ಬೆಂಗಳೂರು ವತಿಯಿಂದ ಆಯೋಜಿಸಿರುವ ಶ್ರೀ ಗುರು ಶಿವಯೋಗಿ ಸಿದ್ದರಾಮೇಶ್ವರರ 851 ನೇ ಜಯಂತಿ ಮಹೋತ್ಸವದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ಸರ್ಕಾರ ಎಲ್ಲಾ ಸಮಾಜದಲ್ಲಿನ ಬಡವರನ್ನು ಮುಖ್ಯ ವಾಹಿನಿಗೆ ತಂದು, ಆರ್ಥಿಕವಾಗಿ, ಸಾಮಾಜಿಕವಾಗಿ ಶಕ್ತಿ ತುಂಬಬೇಕು ಎಂದು ಪ್ರಯತ್ನ ಮಾಡುತ್ತಿದೆ. ಅನುಭವ ಮಂಟಪದಲ್ಲಿ ಸಮಸಮಾಜ ನಿರ್ಮಾಣ ಮಾಡುವ ಬಗ್ಗೆ ಚರ್ಚೆಗಳಾಗುತ್ತಿತ್ತು. ಅಂಥ ಸಮಾಜವನ್ನು ಬಸವಾದಿ ಶರಣರು, ಸಿದ್ದರಾಮೇಶ್ವರರು ಬಯಸಿದ್ದರು ಎಂದರು. ಶಿವಯೋಗಿ ಸಿದ್ದರಾಮೇಶ್ವರರು ಬಸವಣ್ಣನವರ ಸಮಕಾಲೀನರು. ವಚನ ಸಾಹಿತ್ಯದಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. 12 ನೇ ಶತಮಾನದಲ್ಲಿ ಶರಣರು ವಚನಗಳನ್ನು ರಚಿಸಿ ಜೀವನದ ಮೌಲ್ಯಗಳನ್ನು ತಿಳಿಸುವ ಪ್ರಯತ್ನ ಮಾಡಿದ್ದಾರೆ. ಜೀವನ ಮೌಲ್ಯಗಳನ್ನು ಮಾವು ಅರಿಯಬೇಕು. ಹುಟ್ಟು ಆಕಸ್ಮಿಕ, ಸಾವು ಖಚಿತವಾದರೂ ಹುಟ್ಟು ಸಾವುಗಳ ಮಧ್ಯೆನಮ್ಮಬದುಕನ್ನುಸಾರ್ಥಕಮಾಡಿಕೊಳ್ಳಬೇಕು. ನಮ್ಮ ಬದುಕಿನ ಅವಧಿಯಲ್ಲಿ ನಮ್ಮ ಬದುಕನ್ನು ನಾವು ಸಾರ್ಥಕಗೊಳಿಸಿಕೊಂಡಿದ್ದೇವೆಯೇ ಎಂದು ಆತ್ಮಾವಲೋಕನ ಮಾಡಿಕೊಳ್ಳಬೇಕು. ಬಸವಾದಿ ಶರಣರು ಮನುಷ್ಯರಾಗಿ ಬದುಕಬೇಕೆಂದು ಹೇಳಿದ್ದಾರೆ. ಜೀವನದ ಸಾರವನ್ನು ಜನರ ಮುಂದಿಡುವ ಪ್ರಯತ್ನ ಮಾಡಿದ್ದಾರೆ ಎಂದರು. ವಚನ ಸಾಹಿತ್ಯ ಕನ್ನಡ ಸಾಹಿತ್ಯದಲ್ಲಿ ಮಾತ್ರವಲ್ಲದೆ ವಿಶ್ವ ಸಾಹಿತ್ಯಕ್ಕೂ ದೊಡ್ಡ ಕೊಡುಗೆ ನೀಡಿದೆ. ಧರ್ಮಾಚರಣೆ, ಆಧ್ಯಾತ್ಮ ಜನರ ಭಾಷೆಯಲ್ಲಿ ಲಭ್ಯವಿರಲಿಲ್ಲ. ಸಾಮಾನ್ಯ ಜನರಿಗೆ ಓದು ಅರ್ಥ ಮಾಡಿಕೊಳ್ಳಲು ಸಾಧ್ಯವಾಗುತ್ತಿರಲಿಲ್ಲ. ಜನರ ಭಾಷೆಯಲ್ಲಿ ಇದನ್ನು ತಿಳಿಸಿದ್ದು ಬಸವಣ್ಣ ಎಂದರು. ಶರಣ ಸಾಹಿತ್ಯದಲ್ಲಿ ಬಸವಣ್ಣ, ಚೆನ್ನಬಸವಣ್ಣ, ಅಕ್ಕಮಹಾದೇವಿ ಅಲ್ಲಮಪ್ರಭು, ಸಿದ್ದರಾಮೇಶ್ವರರು ಪ್ರಮುಖರು. ಬಸವಾದಿ ಶರಣರು ಮುಖ್ಯ ವಾಗಿ ನೀಡಿದ ಮೌಲ್ಯ ಕಾಯಕ ಮತ್ತು ದಾಸೋಹ. ಸತ್ಯವೇ ಸ್ವರ್ಗ, ಮಿತ್ಯವೆ ನರಕ ಎಂದ ಶರಣರು, ಮೌಢ್ಯಗಳನ್ನು ತಿರಸ್ಕರಿಸಿದ್ದರು. ಬಸವಾದಿ ಶರಣರು ವೈಚಾರಿಕ, ವೈಜ್ಞಾನಿಕ ವಿಚಾರಗಳನ್ನು ಜನರ ಮುಂದಿಟ್ಟಿದ್ದಾರೆ. ಕಂದಾಚಾರ, ಮೂಢನಂಬಿಕೆ, ಮೌಢ್ಯಗಳನ್ನು ತಿರಸ್ಕಾರ ಮಾಡಿದ್ದಾರೆ ಎಂದರು. ಮನುಷ್ಯರು ಚಾತುರ್ವರ್ಣ ವ್ಯವಸ್ಥೆಯನ್ನು ಸ್ವಾರ್ಥಕ್ಕಾಗಿ ಮಾಡಿಕೊಂಡಿದ್ದಾರೆ . ಯಾವ ದೇವಸ್ಥಾನದೊಳಗೆ ಪ್ರವೇಶವಿಲ್ಲದ ದೇವಸ್ಥಾನದೊಳಗೆ ಪ್ರವೇಶಿಸಬೇಡಿ, ನೀವೇ ದೇಗುಲ ನಿರ್ಮಿಸಿ ಪೂಜಿಸಿ ಎಂದು ನಾರಾಯಣ ಗುರುಗಳು ಕರೆ ನೀಡಿದ್ದರು. ಮನುಷ್ಯ ಮನುಷ್ಯ ನನ್ನು ಪ್ರೀತಿಸಬೇಕು. ಮನುಷ್ಯರಾಗಿರಬೇಕು ಎಂದು ಹೇಳಿದರೆ ಕೆಲವರಿಗೆ ಕೋಪ ಬರುತ್ತದೆ ಎಂದರು. ಸಿದ್ದರಾಮೇಶ್ವರನ ಜಯಂತಿ ಆಚರಿಸಿದಾಗ ಅವರ ಬೋಧನೆಯನ್ನು ಅಳವಡಿಸಿಕೊಳ್ಳುವುದೇ ಅವರಿಗೆ ಸಲ್ಲಿಸುವ ಗೌರವ ಎಂದರು. ಪುಷ್ಪಗಿರಿ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಹಾಸನದಲ್ಲಿ ಸುಮಾರು 40,000 ಶಾಖೆಗಳಿದ್ದು, ಅನುದಾನ ಕೋರಿರುವ ಬಗ್ಗೆ ಸಚಿವ ಸಂಪುಟದಲ್ಲಿ ಚರ್ಚೆ ಮಾಡಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಸಿಎಂ ತಿಳಿಸಿದರು.

### ರಾಜಕೀಯ ದ್ವೇಷ, ದಾವಣಗೆರೆಯಿಂದ ಓಡಿಸಲು ಯತ್ನ: ಸಂಸದ

» ದಾವಣಗೆರೆ

ದಾವಣಗೆರೆ ಲೋಕಸಭಾ ಕ್ಷೇತ್ರದ ಬಿಜೆಪಿ ಟಿಕೆಟ್ ತಪ್ಪಿಸಬೇಕು ಎಂದುಕೊಂಡಿದ್ದಾರೆ. ನನ್ನನ್ನು ದಾವಣಗೆರೆಯಿಂದ ಓಡಿಸಬೇಕು ಎಂದುಕೊಂಡಿದ್ದಾರೆ. ಇದು ರಾಜಕೀಯ ದ್ವೇಷ ಬಿಟ್ಟರೆ ಬೇರೆ ಏನೂ ಇಲ್ಲ ಎಂದು ಸಂಸದ ಡಾ.ಜಿ.ಎಂ.ಸಿದ್ದೇಶ್ವರ ಸ್ಫೋಟಕ ಹೇಳಿಕೆ ನೀಡಿದ್ದಾರೆ. ನಗರದಲ್ಲಿ ಮಾಧ್ಯಮದವರ ಜೊತೆ ಮಾತನಾಡಿದ ಅವರು, ನನ್ನನ್ನು ತೆಗೆಯಬೇಕೆಂದುಕೊಂಡಿದ್ದಾರೆ. ನನಗೆ ಜೀವ ಬೆದರಿಕೆ ಇಲ್ಲ. ಜೀವ ಭಯದಲ್ಲಿದೆ ಅಷ್ಟೇ. ಇದು ರಾಜಕೀಯ ದ್ವೇಷ. ನಾನು ಯಾರಿಗೂ ಜಗ್ಗಲ್ಲ, ಬಗ್ಗಲ್ಲ. ಬಿಜೆಪಿ ಟಿಕೆಟ್ ಘೋಷಿಸುವವರೆಗೂ ನಾನೇ ಅಭ್ಯರ್ಥಿ ಎಂದುಕೊಂಡಿದ್ದೇನೆ ಎಂದರು.ಹೈಕಮಾಂಡ್ ಯಾರಿಗೆ ಟಿಕೆಟ್ ಕೊಡುತ್ತೆ ಎಂಬುದು ಚುನಾವಣಾ ಸಮಯದಲ್ಲಿ ಗೊತ್ತಾಗುತ್ತದೆ. ಅಲ್ಲಿಯವರೆಗೆ ನಾನೇ ಅಭ್ಯರ್ಥಿ ಎಂದುಕೊಂಡಿದ್ದೇನೆ. ನಮ್ಮ ಕುಟುಂಬಕ್ಕೆ ಏಳು ಬಾರಿ ಬಿಜೆಪಿ ಟಿಕೆಟ್ ನೀಡಿದೆ. ಹಾಗಾಗಿ, ಬೇರೆ ಪಕ್ಷಕ್ಕೆ ಹೋಗುವ ಆಲೋಚನೆ ಇಲ್ಲ. ನನ್ನ ಪುತ್ರನನ್ನು ಕಾಂಗ್ರೆಸ್‌ಗೆ ಕರೆದರು. ಯಾಕೆ ಈ ವಯಸ್ಸಿನಲ್ಲಿ ಬೇರೆ ಪಕ್ಷಕ್ಕೆ ಹೋಗಬೇಕು. ಯಾವುದೇ ಕಾರಣಕ್ಕೂ ಹೋಗುವುದಿಲ್ಲ. ನನ್ನ ಉಸಿರು ಇರುವವರೆಗೂ ಬಿಜೆಪಿಯಲ್ಲೇ ಇರುತ್ತೇನೆ ಎಂದು ತಿಳಿಸಿದರು.ಒಂದು ವೇಳೆ ಬಿಜೆಪಿ ಬೇರೆಯವರೆಗೆ ಟಿಕೆಟ್ ನೀಡಿದರೆ ತನು, ಮನ, ಧನದೊಂದಿಗೆ ಸಂಪೂರ್ಣ ಸಹಕಾರ ನೀಡುತ್ತೇನೆ. ರಾಜಕೀಯ ದ್ವೇಷದಿಂದ ನನ್ನ ಮೇಲೆ ಆರೋಪ ಮಾಡುತ್ತಿದ್ದಾರೆ. ಯಾರೂ ನಂಬಲು ಹೋಗಬೇಡಿ. ನಾನು ಸೇವೆ ಮಾಡಲು ಅಷ್ಟೇ ಬಂದಿರುವುದು. ಇದು ಎಲ್ಲರಿಗೂ ಗೊತ್ತಿರುವ ವಿಚಾರ. ಆರೋಪ, ಆಪಾದನೆಗಳಿಗೆ ಕಿವಿಗೊಡಬೇಡಿ.

# ಪ್ರೀತಿಟ್ರಸ್ಟ್ ಕಾರ್ಯಕ್ಕೆ ರಾಜ್ಯಪಾಲರಿಂದ ಪ್ರಶಂಸೆ

» ದಾವಣಗೆರೆ

ಪ್ರೀತಿ ಆರೈಕೆ ಟ್ರಸ್ಟ್ ಮತ್ತು ಆರೈಕೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಸಂಯುಕ್ತಾಶ್ರಯದಲ್ಲಿ ದಾವಣಗೆರೆ ಜಿಲ್ಲಾದ್ಯಂತ ಏರ್ಪಡಿಸುತ್ತಿರುವ ಉಚಿತ ಆರೋಗ್ಯ ತಪಾಸಣೆ ಶಿಬಿರಗಳ ಬಗ್ಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಮೆಚ್ಚುಗೆ ಸೂಚಿಸಿ, ಅಭಿನಂದನಾ ಪತ್ರ ಕಳುಹಿಸಿದ್ದಾರೆ.

ಜನವರಿ 3ರಂದು ಬೆಂಗಳೂರಿನ ರಾಜಭವನಕ್ಕೆ ಆಹ್ವಾನಿಸಿ ಆರೈಕೆ ಆಸ್ಪತ್ರೆಯ ಮುಖ್ಯಸ್ಥರಾದ ಡಾ. ರವಿಕುಮಾರ್ ಟಿ.ಜಿ ಅವರೊಂದಿಗೆ ಶಿಬಿರಗಳ ಆಯೋಜನೆ ಕುರಿತಾಗಿ ರಾಜ್ಯಪಾಲರು ಚರ್ಚೆ ನಡೆಸಿದ್ದರು. ಈ ವೇಳೆ, ಜಗಳೂರಿನ ಮಾಜಿ ಶಾಸಕ ಟಿ.ಗುರುಸಿದ್ದನಗೌಡರು ಸಹ ಜತೆಗಿದ್ದು, ಪ್ರೀತಿ ಆರೈಕೆ ಟ್ರಸ್ಟ್ ಆಯೋಜಿಸುತ್ತಿರುವ ಆರೋಗ್ಯ ಸೇವೆಯ ಬಗ್ಗೆ ಸಂಕ್ಷಿಪ್ತ ವಿವರಣೆ ನೀಡಿದ್ದರು. ರಾಜ್ಯಪಾಲರಿಂದ ಪ್ರಶಂಸನಾ ಪತ್ರ ಬಂದಿರುವ ಬಗ್ಗೆ ಡಾ. ರವಿಕುಮಾರ್ ಟಿ.ಜಿ. ಅವರು ಪ್ರತಿಕ್ರಿಯಿಸಿ, ಮೂರು ವರ್ಷಗಳ ಹಿಂದೆ ಇದೇ ದಿನ ಶ್ರೀಮತಿ ಪ್ರೀತಿ ಅವರು ನಮ್ಮನ್ನು ಅಕಾಲಿಕವಾಗಿ ಅಗಲಿದರು. ಪ್ರೀತಿ ಅವರ ಸಾಮಾಜಿಕ ಸೇವಾಕಾರ್ಯಸ ತುಡಿತವನ್ನು ಈಡೇರಿಸಲು ಪ್ರೀತಿ ಆರೈಕೆ ಟ್ರಸ್ಟ್ ಆರಂಭಿಸಿದೆವು.



ಈವರೆಗೂ ಜಿಲ್ಲಾದ್ಯಂತ 48 ಆರೋಗ್ಯ ಶಿಬಿರಗಳನ್ನು ಆಯೋಜಿಸಿ, ಸರಿಸುಮಾರು 23 ಸಾವಿರಕ್ಕೂ ಹೆಚ್ಚು ಜನರಿಗೆ ಆರೋಗ್ಯ ದಾಸೋಹ ನೀಡಿದ್ದೇವೆ. ಇದನ್ನು ಗುರುತಿಸಿ ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ಪ್ರಶಂಸನಾ ಪತ್ರ ನೀಡಿರುವುದು ಸಂತಸದ ಸಂಗತಿ. ಈ ಅಭಿನಂದನೆಯನ್ನು ಪ್ರೀತಿ ಆರೈಕೆ ಟ್ರಸ್ಟ್ ಮತ್ತು ಆರೈಕೆ ಆಸ್ಪತ್ರೆಯ ನನ್ನ ಕುಟುಂಬ ಮತ್ತು ದಾವಣಗೆರೆ ಜಿಲ್ಲೆಯ ಸಮಸ್ತ ಜನತೆಗೆ ಅರ್ಪಿಸುತ್ತೇನೆ ಎಂದು ಹೇಳಿದ್ದಾರೆ.

ಟ್ರಸ್ಟ್ ಪ್ರಾರಂಭದ ದಿನವೇ 30 ನಿವೃತ್ತ ಸೈನಿಕರಿಗೆ ಅಜೀವ ಪರ್ಯಂತ ಉಚಿತ ಚಿಕಿತ್ಸೆ ನೀಡಲಾರಂಭಿಸಿದೆವು. ಇದರ ಜತೆಗೆ, ಉಚಿತವಾಗಿ ಆರೋಗ್ಯ ಚಿಕಿತ್ಸೆ ನೀಡುವ ಜತೆಗೆ ಗ್ರಾಮೀಣ ಭಾಗದ ಜನರಿಗೆ ಆರೋಗ್ಯದ ಕಾಳಜಿ, ತಿಳುವಳಿಕೆ, ಮಾರ್ಗದರ್ಶನ, ಸಲಹೆ ನೀಡುವ ಉದ್ದೇಶದಿಂದ ಉಚಿತ ಶಿಬಿರ ಆರಂಭಿಸಿದೆವು. ಸರಿಯಾದ ಮಾಹಿತಿ ಇಲ್ಲದೆಯೇ ಹಠಾತ್ ಅನಾಹುತ ಆಗುವ ಬಗ್ಗೆ ಅರಿವು ಮೂಡಿಸುತ್ತ ನಮ್ಮ ಆರೋಗ್ಯ ದಾಸೋಹ ಕಾರ್ಯವನ್ನು ಮುಂದುವರಿಸಲಿದ್ದೇವೆ ಎಂದು ಹೇಳಿದರು.



**25 ರಂದು ನಡೆಯಲಿರುವ ದಾವಣಗೆರೆ ಜಿಲ್ಲಾ ಸಹಕಾರ ಬ್ಯಾಂಕ್ ನಿ. ಆಡಳಿತ ಮಂಡಳಿ ನಿರ್ದೇಶಕರ ಚುನಾವಣೆಗೆ ಎ ವರ್ಗದ ಚನ್ನಗಿರಿ ಭಾಗ 2 ಕ್ಕೆ ಸಹಕಾರ ಸಂಘಗಳ ವರ್ಗಕ್ಕೆ ಆಯ್ಕೆಯಾಗುವ ನಿರ್ದೇಶಕರ ಸ್ಥಾನಕ್ಕೆ ದಾಗಿನಕಟ್ಟೆ ಸಂತೋಷ ನಾಮಪತ್ರ ಸಲ್ಲಿಸಿದರು. ಶಾಸಕ ಬಸವರಾಜು ಉಪಸ್ಥಿತರಿದ್ದರು.**

# ಕಾಂಗ್ರೆಸ್ಸಿಗರ ಹೃದಯದಲ್ಲಿ ರಾಮ ಇದ್ದಾನೆ: ಮಾಜಿ ಸಚಿವ ಅಂಜನೇಯ

» ಚಿತ್ರದುರ್ಗ

ಬಿಜೆಪಿ ರಾಮನ ಹೆಸರಿನಲ್ಲಿ ಮತಕ್ಕಾಗಿ ವ್ಯಾಪಾರ ಮಾಡುತ್ತಿದೆ. ಆತನ ಭಾವಚಿತ್ರ ಇಟ್ಟುಕೊಂಡು ಮತದಾರರನು ಸೆಳೆಯುವ ಕಾರ್ಯವನ್ನು ಮಾಡುತ್ತಿದೆ. ಆದರೆ ಕೋಟ್ಯಾಂತರ ಕಾಂಗ್ರೆಸ್ಸಿಗರ ಹೃದಯದಲ್ಲಿ ರಾಮನಿದ್ದಾನೆ ಎಂದು ಮಾಜಿ ಸಚಿವ ಹೆಚ್. ಅಂಜನೇಯ ತಿಳಿಸಿದರು.



ನಗರದ ಹೊರವಲಯದ ಮಾದಾರ ಚನ್ನಯ್ಯ ಗುರುಪೀಠದ ಪಕ್ಕದಲ್ಲಿ ಜ.28 ರಂದು ನಡೆಯಲಿರುವ ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟ ಆಯೋಜಿಸಿರುವ ಬೃಹತ್ ಜಾಗೃತಿ ಸಮಾವೇಶದ ವೇದಿಕೆ ಮತ್ತು ಪೆಂಡಾಲ್ ನಿರ್ಮಾಣ ಕಾರ್ಯಕ್ಕೆ ಬುದ್ದ, ಬಸವ ಮತ್ತು ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ನಂತರ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, 'ಕಾಂಗ್ರೆಸ್ ರಾಮನ ವಿರೋಧಿ ಅಲ್ಲ, ಹಿಂದೂಗಳ ವಿರೋಧಿ ಅಲ್ಲ. ಹಿಂದೂಗಳ ಪರ, ಮುಸ್ಲಿಂರ ಪರ ಎಲ್ಲಾ ಧರ್ಮಗಳ ಜನರ ಪರವಿದ್ದೇವೆ' ಎಂದರು. ಕಾಂಗ್ರೆಸ್ ಸರ್ಕಾರ ಹಿಂದೂ ಧರ್ಮ, ಶ್ರೀರಾಮನ ವಿರೋಧಿ ಎಂಬ ಸಂಸದ ಮುನಿಸ್ವಾಮಿ ಹೇಳಿಕೆಗೆ, 'ಬಹಳಷ್ಟು ಜನ ಹಿಂದೂಗಳಿರುವುದೇ ಕಾಂಗ್ರೆಸ್ ಪಕ್ಷದಲ್ಲಿ. ಹಿಂದೂ ಧರ್ಮ, ರಾಮ ಪೂಜೆ ಮಾಡುವವರು ಹೆಚ್ಚಿರುವುದು ಕಾಂಗ್ರೆಸ್ ಪಕ್ಷದಲ್ಲಿ. ರಾಮನ ಹೆಸರಿನಲ್ಲಿ ಮತಕ್ಕಾಗಿ ವ್ಯಾಪಾರ ಮಾಡುವವರು ಕಾಂಗ್ರೆಸ್ಸಿಗರಲ್ಲ.

ಕೋಟ್ಯಾಂತರ ಕಾಂಗ್ರೆಸ್ಸಿಗರ ಹೃದಯದಲ್ಲಿ ರಾಮನಿದ್ದಾನೆ. ಆಂಜನೇಯನ ಹೃದಯದಲ್ಲಿ ರಾಮನಿದ್ದಂತೆ ಕಾಂಗ್ರೆಸ್ಸಿಗರ ಹೃದಯದಲ್ಲಿ ರಾಮ' ಎಂದು ತಿರುಗೇಟು ನೀಡಿದರು. ರಾಮರಾಜ್ಯದ ಕನಸು ಅನಾವರಣ ಮಾಡಿ ಕಾರ್ಯರೂಪಕ್ಕೆ ತಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಗ್ಗೆ ಹಗುರವಾಗಿ ಮಾತನಾಡಿರುವ ಅನಂತ ಕುಮಾರ್ ಹೆಗಡೆ ಒಬ್ಬ ಮನುಷ್ಯನಾ 'ಅನಂತ ಕುಮಾರ್ ಒಬ್ಬ ಹುಚ್ಚ. ಹುಚ್ಚರ ಬಗ್ಗೆ ಯಾರಾದರೂ ಮಾತಾಡ್ತಾರಾ?.

ಅವನ ಬಗ್ಗೆ ಮಾತಾಡಲ್ಲ. ಅವನ ಬಗ್ಗೆ ಮಾತಾಡಿ ದೊಡ್ಡವನನ್ನಾಗಿಸಿದಂತೆ ಆಗುತ್ತದೆ' ಎಂದು ವಾಗ್ದಾಳಿ ನಡೆಸಿದರು.

'ಅವನು ಬೆಳೆದ ಹಿನ್ನೆಲೆ, ಸಂಸ್ಕೃತಿ ಅದೇ ರೀತಿ ಇರಬೇಕು. ಹೀಗಾಗಿ ಅವನು ಆ ರೀತಿ ವರ್ತನೆ ಮಾಡುತ್ತಾನೆ. ನಾವು ಆ ರೀತಿ ಅಲ್ಲ, ನಾನು ಸಹ ಏಕವಚನ ಬಳಸಬಾರದು. ಆದರೆ ಅವನಿಗೆ ಯಾವ ಭಾಷೆ ಬಳಸಿದರೂ ಕೂಡ ಸಾಲದು' ಎಂದು ಕಿಡಿಕಾರಿದರು.

## ಪ್ರಮುಖ ಸುದ್ದಿ

### ಸಮಸಮಾಜದ ಕನಸು ನನಸಾಗಲು ಆರ್ಥಿಕ, ಸಾಮಾಜಿಕ ಶಕ್ತಿ ಪ್ರತಿಯೊಬ್ಬರೂ ಬರಬೇಕು

# ಕಾಯಕದಲ್ಲಿ ಮೇಲುಕೀಳು ಎಂಬುದಿಲ್ಲ: ಸಿದ್ದರಾಮಯ್ಯ

» ಹಾವೇರಿ

ಅಂಬಿಗ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಈಗಾಗಲೇ ಎರಡು ಬಾರಿ ರಾಜ್ಯ ಸರ್ಕಾರ ಕೇಂದ್ರ ಸರಕಾರಕ್ಕೆ ಶಿಫಾರಸ್ಸು ಮಾಡಿದೆ.ಪರಿಶಿಷ್ಟ ವರ್ಗಕ್ಕೆ ಸೇರಲು ಸಮುದಾಯ ಸಂಪೂರ್ಣ ಅರ್ಹತೆ ಪಡೆದಿದ್ದು, ಕೇಂದ್ರ ಸರ್ಕಾರ ಈಗ ಪುನಃ ಕೇಳಿರುವ ಸ್ಪಷ್ಟೀಕರಣವನ್ನು ಕೂಡಲೇ ಮಾಹಿತಿ ತರಿಸಿ ಸ್ಪಷ್ಟೀಕರಣ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಅವರು ಇಂದು ಶ್ರೀ ನಿಜ ಶರಣ ಅಂಬಿಗರ ಚೌಡಯ್ಯನವರ 6ನೇ ಶರಣ ಸಂಸ್ಕೃತಿ ಉತ್ಸವ ಹಾಗೂ ನಿಜಶರಣ ಅಂಬಿಗರ ಚೌಡಯ್ಯನವರ 904 ನೇ ಜಯಂತೋತ್ಸವ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು

ನಂತರದಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಕ್ರಮ ವಹಿಸಬೇಕು ಎಂದರು. 96-97 ರಲ್ಲಿಯೇ ದಿವಂಗತ ಶಾಸಕ ನಾರಾಯಣ ರಾವ್ ಎಸ್.ಟಿ ಗೆ ಸೇರಿಸಲು ಪ್ರಯತ್ನಿಸಿದ್ದರು ಎಂದು ಮರೆಯಬಾರದು ಎಂದರು.



ದೋಣಿ ನಡೆಸುವುದು ಹಾಗೂ ಮೀನು ಹಿಡಿಯುವ ಕಾಯಕ ಅಂಬಿಗರದ್ದು. ಕಾಯಕದಲ್ಲಿ ಮೇಲುಕೀಳು ಎಂಬುದಿಲ್ಲ. ಮನುಷ್ಯರ ನಡುವೆ ತಾರತಮ್ಯ ಇರಬಾರದು. ಕಾಯಕವನ್ನು ಆಧರಿಸಿ ಮೇಲು ಕೀಳು ಎಂದು ತಾರತಮ್ಯ ಮಾಡಿದ್ದರ ವಿರುದ್ಧ ಬಸವಾದಿ ಶರಣರು ಹೋರಾಟ ಮಾಡಿದರು ಎಂದರು. ಈ ಸಾಲಿನಲ್ಲಿ ಅಂಬಿಗರ ಚೌಡಯ್ಯ ಮೊದಲನೇ ಸಾಲಿನಲ್ಲಿ ನಿಲ್ಲುತ್ತಾರೆ. ಅದಕ್ಕೆ ಬಸವಣ್ಣನವರು ಇವರಿಗೆ ನಿಜಶರಣ ಎಂದು ಕರೆದರು ಎಂದು ಸಿಎಂ ವಿವರಿಸಿದರು. ಸಮಸಮಾಜದ ಕನಸು ನನಸಾಗಲು ಆರ್ಥಿಕ, ಸಾಮಾಜಿಕ ಶಕ್ತಿ ಪ್ರತಿಯೊಬ್ಬರೂ ಬರಬೇಕುಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ಸ್ಥಾಪನೆಯನ್ನು ಹಿಂದೆ ನಮ್ಮ ಅವಧಿಯಲ್ಲಿಯೇ ಮಾಡಲಾಯಿತು. ಆರ್ಥಿಕ ಶಕ್ತಿ ಇಲ್ಲದ ಸಮಾಜ ಮುಖ್ಯ ವಾಹಿನಿಗೆ ಬರಲು ಸಾಧ್ಯವಿಲ್ಲ. ಸಮಸಮಾಜದ ಕನಸು ನನಸಾಗಲು ಆರ್ಥಿಕ, ಸಾಮಾಜಿಕ ಶಕ್ತಿ ಪ್ರತಿಯೊಬ್ಬರೂ ಬರಬೇಕು. ಬಸವಾದಿ ಶರಣರು ಕಾಯಕ ಮತ್ತು ದಾಸೋಹ ಎಂಬ ಎರಡು ತತ್ವಗಳನ್ನು ನೀಡಿದ್ದಾರೆ. ಕಾಯಕ ಎಂದರೆ ಉತ್ಪಾದನೆ, ದಾಸೋಹ ಎಂದರೆ ವಿತರಣೆ. ಕಾಯಕದಲ್ಲಿ ಎಲ್ಲರೂ ತೊಡಗಿ ಉತ್ಪಾದನೆಯನ್ನು ಎಲ್ಲರೂ ಹಂಚಿಕೊಳ್ಳಬೇಕು ಎನ್ನುವುದು ಇದರ ಅರ್ಥ. ಇನ್ನೊಬ್ಬರ ಗಳಿಕೆಯನ್ನು ಕುಳಿತು ಅನುಭವಿಸಬಾರದು.ಜಾತಿವ್ಯವಸ್ಥೆಗೆಚಾಲನೆ ಇಲ್ಲದಿರುವುದು ಆರ್ಥಿಕ, ಸಾಮಾಜಿಕ ಚಟುವಟಿಕೆ ಇಲ್ಲದಿರುವುದರಿಂದ. ಇದಕ್ಕೆ ಚಾಲನೆ ನೀಡಬೇಕೆಂದು ಬಸವಾದಿ ಶರಣರು ಹೇಳಿದ್ದರು ಎಂದರು. ಮಕ್ಕಳು ಯಾವ ಕಾರಣದಿಂದಲೂ ವಿದ್ಯೆಯಿಂದ ವಂಚಿತರಾಗಬಾರದು ಅಂಬಿಗರ ಚೌಡಯ್ಯ ನವರ ಹಾದಿಯಲ್ಲಿ ನಡೆಯುವುದು ನಾವು ಅವರಿಗೆ ಸಲ್ಲಿಸುವ ನಿಜವಾದ ಗೌರವ. ಅವರ ವಿಚಾರಗಳನ್ನು ಜನರಿಗೆ ತಿಳಿಸಲು ಜಯಂತ್ಯೋತ್ಸವವನ್ನು ಆಚರಿಸಲಾಗುತ್ತದೆ ಎಂದರು.

ನಮ್ಮ ಮಕ್ಕಳು ಯಾವ ಕಾರಣದಿಂದಲೂ ವಿದ್ಯೆಯಿಂದ ವಂಚಿತರಾಗಬಾರದು. ಸಮಾಜದ ಅಸಮಾನತೆಯನ್ನು ಹೋಗಲಾಡಿಸಬೇಕು. ಪಟ್ಟಭದ್ರ ಹಿತಾಸಕ್ತಿಯ ವಿರುದ್ಧ ನಿಲ್ಲಬೇಕಾಗುತ್ತದೆ. ಬದಲಾವಣೆ ಬಯಸದ ಜನ ಆಗಲೂ ಇದ್ದರು, ಈಗಲೂ ಇದ್ದಾರೆ ಎಂದರು. ಮುಖ್ಯ ಮಂತ್ರಿಗಳು ಹಿಂದುಳಿದ ಸಮಾಜದೊಂದಿಗೆ ಸದಾ ಇರುವುದಾಗಿ ಭರವಸೆಯಿತ್ತರು.

## ಫಾಸ್ಟ್ ನ್ಯೂಸ್

### ಪೂರ್ವ ಸಿದ್ಧತಾ ಪರೀಕ್ಷಾ ಕೇಂದ್ರಗಳಿಗೆ ಬಿಇಓ ಭೇಟಿ



» ಪರಶುರಾಂಪುರ

ಸಮೀಪದ ದೊಡ್ಡಚೆಲ್ಲೂರು ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಹಳೆ ವಿದ್ಯಾರ್ಥಿಗಳ ಜೊತೆಗೆ ಸಿಬ್ಬಂದಿ ಸಹಕಾರದಲ್ಲಿ ಶನಿವಾರ ಬೆಳಗ್ಗೆ ಆಯೋಜಿಸಿದ್ದ ಯೋಗ ಮ್ಯಾಟ್ ವಿತರಣೆ ಕಾರ್ಯಕ್ರಮ ನಡೆಯಿತು.ಈ ವೇಳೆಯಲ್ಲಿ ಬಿಇಓ ಕೆ.ಎಸ್ ಸುರೇಶ್ ಮಾತನಾಡಿ, ದೈಹಿಕ, ಮಾನಸಿಕ ಒತ್ತಡ ನಿವಾರಣೆ ಯೋಗ,ಧ್ಯಾನ ಮುಖ್ಯವಾಗಿರುತ್ತದೆ ಆದ್ದರಿಂದ ಆರೋಗ್ಯವೇ ಭಾಗ್ಯವಾಗಿದ್ದರೇ ವಿದ್ಯಾಭ್ಯಾಸದಲ್ಲಿ ಉನ್ನತ ಪ್ರಗತಿ ಸಾಧಿಸಲು ಸಹಕಾರಿ ಎಂದರು.

ಮುಖ್ಯ ಶಿಕ್ಷಕ ಹನುಮಂತರಾಯಪ್ಪ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಉತ್ತಮ ಸಾಧನೆಗೆ ಯೋಗಾಭ್ಯಾಸ ಮುಖ್ಯವಾಗಿರುತ್ತದೆ.ಮುಂದೇ ಉತ್ತಮ ಪ್ರಜೆಗಳಾಗಿ ಸಮಾಜಕ್ಕೆ ಉತ್ತಮ ಕೊಡುಗೆ ನೀಡಲು ಓದುವದರಲ್ಲಿ ಪ್ರಾಮಾಣಿಕ ಪ್ರಯತ್ನ ನಿಮ್ಮದಾಗಿರಲಿ ಎಂದರು.

**ಪೂರ್ವ ಸಿದ್ಧತಾ ಪರೀಕ್ಷೆ ಸ್ಥಳಕ್ಕೆ ಬಿಇಓ ಭೇಟಿ:** ಕಳೆದ ದಿನಗಳಲ್ಲಿ ಎಸ್ಸೆಸ್ಸೆಲ್ಸಿ ಮಕ್ಕಳಿಗೆ ಶಾಲಾ ಹಂತದ ಪೂರ್ವ ಸಿದ್ಧತಾ ಪರೀಕ್ಷೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ವಿವಿಧ ಪರೀಕ್ಷಾ ಕೇಂದ್ರಗಳಿಗೆ ಬಿಇಓ ಸುರೇಶ್ ಭೇಟಿ ನೀಡಿ ವಾಷಿ9ಕಾ ಪರೀಕ್ಷಾ ಮಾದರಿಯಲ್ಲಿ ಎಸ್ಸೆಸ್ಸೆಲ್ಸಿ ಮಕ್ಕಳು ತಯಾರಾಗಲು ,ಮಾದರಿ ಪರೀಕ್ಷೆಯಿಂದ ಸಹಕಾರಿಯಾಗಿ ಉತ್ತಮ ಅಂಕಗಳೊಂದಿಗೆ ಫಲಿತಾಂಶ ಪಡೆಯುವ ಛಲ ಬರಬೇಕು ಎಂದು ಮಕ್ಕಳಿಗೆ ಕಿವಿ ಮಾತು ಹೇಳಿದರು.ಸಂದರ್ಭದಲ್ಲಿಶಿಕ್ಷಕರಾದಮಂಜುನಾಥ, ನರಸಿಂಹಮೂರ್ತಿ,ರಘು, ಪ್ರಕಾಶ್,ಅರುಣ್,ಲಕ್ಷ್ಮಕ್ಕ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

### ಯೂತ್ ಕಪ್ ಫುಟ್‌ಬಾಲ್ ಪಂದ್ಯ: ಚಿತ್ರದುರ್ಗ ಪ್ರಥಮ ಸ್ಥಾನ



» ಚಿತ್ರದುರ್ಗ

ಪ್ರಪಂಚದಲ್ಲಿಯೇ ಬೆಸ್ಟ್ ಗೇಮ್ ಎನಿಸಿಕೊಂಡಿರುವ ಫುಟ್‌ಬಾಲನ್ನು ಕಿಂಗ್ ಆಫ್ ದ ಗೇಮ್ ಎಂದು ಕರೆಯಲಾಗುತ್ತದೆ. ಗೋಲ್ ಹೊಡೆಯಬೇಕಾದರೆ ನಿರ್ದಿಷ್ಟ ಕರಾರುವಕ್ಕಾಗಿರಬೇಕೆಂದು ಹಿರಿಯ ನ್ಯಾಯವಾದಿ ಫಾತ್ಯರಾಜನ್ ಹೇಳಿದರು. ಚಿತ್ರದುರ್ಗ ಫುಟ್‌ಬಾಲ್ ಕ್ಲಬ್ ವತಿಯಿಂದ ಸ್ಟೇಡಿಯಂನಲ್ಲಿ ನಡೆದ ಫಾತ್ಯರಾಜನ್ ಯೂತ್ ಕಪ್ ಪಂದ್ಯದಲ್ಲಿ ವಿಜೇತರಿಗೆ ಕಪ್ ವಿತರಿಸಿ ಮಾತನಾಡಿದರು.

ಚಿತ್ರದುರ್ಗದಲ್ಲಿ ಅನೇಕ ಕ್ರೀಡೆಗಳು ನಡೆಯುತ್ತವೆ. ಆದರೆ ಪ್ರೋತ್ಸಾಹಿಸುವವರು ಕಮ್ಮಿಯಿರುವುದು ನೋವಿನ ಸಂಗತಿ. ಜೀವನದಲ್ಲಿ ಮುಂದೆ ಒಳ್ಳೆಯ ಕ್ರೀಡಾಪಟುಗಳಾಗಿ ಚಿತ್ರದುರ್ಗ ಜಿಲ್ಲೆಗೆ ಕೀರ್ತಿ ತನ್ನಿ ಎಂದು ಫುಟ್‌ಬಾಲ್ ಆಟಗಾರರಿಗೆ ಹಾರೈಸಿದರು.

ಡಾ.ರಾಜೇಶ್ ಮಾತನಾಡಿ ಫುಟ್‌ಬಾಲ್ ಒಳ್ಳೆಯ ಆಟ. ಕ್ರೀಡೆಯಿಂದ ಮಾನಸಿಕ ಹಾಗೂ ದೈಹಿಕವಾಗಿ ಸದೃಢರಾಗಿರಬಹುದು. ಕ್ರೀಡೆಯಲ್ಲಿ ಅತ್ಯುತ್ತಮ ಸಾಧನೆ ಮಾಡುವ ಅವಕಾಶವಿದೆ. ಆವೇಷವನ್ನು ಕ್ರೀಡೆಯಲ್ಲಿ ಪ್ರದರ್ಶಿಸಿ ಅಂಗಗಳಿಗೆ ಊನ ಮಾಡಕೊಳ್ಳಬೇಡಿ ಎಂದು ಎಚ್ಚರಿಸಿದರು.

ಅಕ್ರಮ್‌ನಾಗ್ತೆ ಮಾತನಾಡುತ್ತ ಇದು ಮೂರನೆ ವರ್ಷದ ಪಂದ್ಯವಾಗಿದ್ದು, ನಾವುಗಳು ಚಿಕ್ಕವರಿದ್ದಾಗ ಫಾತ್ಯರಾಜನ್‌ರವರು ಫುಟ್‌ಬಾಲ್‌ಗೆ ಉತ್ತೇಜನ ನೀಡಿ ಹಣದ ಸಹಾಯವನ್ನು ಮಾಡಿದ್ದಾರೆ. ಅದಕ್ಕಾಗಿ ಅವರ ಹೆಸರಿನಲ್ಲಿಯೇ ಯೂತ್ ಕಪ್ ನಡೆಸಲು ತೀರ್ಮಾನಿಸಿ ಪ್ರತಿ ವರ್ಷವೂ ಆಯೋಜಿಸಲಾಗುವುದು ಎಂದು ಹೇಳಿದರು.

ಅಂತರಾಷ್ಟ್ರೀಯ ವೈಟ್ ಲಿಫ್ಟರ್ ಎನ್.ಡಿ.ಕುಮಾರ್, ಎಂ.ಡಿ.ನವಾಜ್, ಸಿದ್ದಿಕ್, ವಸಂತ್ ಈ ಸಂದರ್ಭದಲ್ಲಿದ್ದರು.

### ಶಿವು, ಉಮೇಶ್‌ಗೆ ಗೌರವ ಸಮರ್ಪಣೆ

» ಕಡೂರು

ತಾಲ್ಲೂಕಿನ ಯಳ್ಳಂಬಳಸೆ ಶ್ರೀ ಮಾದಿಹಳ್ಳಿ ಬೀರಲಿಂಗೇಶ್ವರ ಸ್ವಾಮಿ ಸನ್ನಿದಾನದಲ್ಲಿ ಕಾವ್ಯಶ್ರೀ ಪ್ರಶಸ್ತಿಗೆ ಭಾಜನರಾದ ಸಾಹಿತಿ ಡಾ.ಹಿರೇನಲ್ಲೂರು ಶಿವು ಹಾಗೂ ಪಿಹೆಚ್‌ಡಿ ಪದವಿ ಪುರಸ್ಕೃತ ಡಾ. ಎಂ.ಉಮೇಶ್ ಅವರಿಗೆ ದೇವಸ್ಥಾನದ ವತಿಯಿಂದ ಗೌರವ ಸಮರ್ಪಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಬೀರೂರು ಪುರಸಭೆ ಹಿರಿಯ ಆರೋಗ್ಯ ಅಧಿಕಾರಿ ವೈ.ಎಂ.ಲಕ್ಷ್ಮಣ್, ಗ್ರಾ.ಪಂ. ಸದಸ್ಯ ಶ್ರೀನಿವಾಸ್, ಮುಖಂಡರಾದ ತಿಮ್ಮಯ್ಯ, ವೈ.ಎಂ.ಮಂಜುನಾಥ್, ಚಂದ್ರು, ಪೂಜಾರಿ, ಕಲ್ಲೇಶಪ್ಪ, ಶೇಖರ್, ಅಶೋಕ್ ಹಾಜರಿದ್ದರು.

ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹೇಳಿಕೆ

# ರಾಜ್ಯ ಮಟ್ಟದ ಸಮ್ಮೇಳನ ಯಶಸ್ವಿಗೆ ಟೊಂಕಕಟ್ಟಿ

» ದಾವಣಗೆರೆ

ರಾಜ್ಯದ ಬೇರೆ ಬೇರೆ ಜಿಲ್ಲೆಗಳಲ್ಲಿ ಈವರೆಗೂ ನಡೆದ ರಾಜ್ಯ ಮಟ್ಟದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸಮ್ಮೇಳನ ಒಂದಕ್ಕಿಂತ ಒಂದು ವಿಭಿನ್ನವಾಗಿ ನಡೆದಿದ್ದು, ಫೆಬ್ರವರಿಯಲ್ಲಿ 3 ಮತ್ತು 4 ರಂದು ರಾಜ್ಯದ ಕೇಂದ್ರ ಬಿಂದು ದಾವಣಗೆರೆಯಲ್ಲಿ ನಡೆಯಲಿರುವ ಸಮ್ಮೇಳನ ಅತ್ಯಂತ ಮಹತ್ವ ಪಡೆದಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹೇಳಿದರು.



ನಗರದ ಮಾಹಾನಗರಪಾಲಿಕೆ ಆವರಣದಲ್ಲಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಕಚೇರಿಯಲ್ಲಿ ನಡೆದ ಸಮ್ಮೇಳನದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಮೈಸೂರು, ಮಂಗಳೂರು, ಕಲ್ಬುರ್ಗಿ ಮತ್ತು ವಿಜಯಪುರ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ನಡೆದ ಸಮ್ಮೇಳನಗಳು ಅಭೂತಪೂರ್ವವಾಗಿ ನಡೆದಿವೆ. ಮಾತ್ರವಲ್ಲ, ವಿಚಾರಗೋಷ್ಠಿಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಸಮ್ಮೇಳನದ ವಿವಿಧ ಸಮಿತಿಗಳು ಅತಿಥಿಗಳಿಗೆ ನೀಡಿದ ಅತಿಥ್ಯ ಮತ್ತೆ ಮತ್ತೆ ನೆನಪು ಮಾಡುತ್ತಿವೆ. ಅದಕ್ಕಿಂತ ಹೆಚ್ಚು ನೆನಪು ಮಾಡುವಂತ ದಾವಣಗೆರೆ ಸಮ್ಮೇಳನ ಆಗಬೇಕು. ಇದಕ್ಕೆಲ್ಲ ಜಿಲ್ಲೆಯ ಪತ್ರಕರ್ತರು ಟೊಂಕಕಟ್ಟಿ ನಿಲ್ಲಬೇಕೆಂದು ಕಿವಿಮಾತು ಹೇಳಿದರು.

ಮೈಸೂರಿನಲ್ಲಿ ನಡೆದ ಸಮ್ಮೇಳನ ದಸರಾ ವೈಭವದಂತೆ ನಡೆಯಿತು. ಅದೇ ರೀತಿಯಾಗಿ ಮಂಗಳೂರಿನಲ್ಲೂ ಅದ್ದೂರಿಯಾಗಿ ನಡೆಯಿತು. ಇದಕ್ಕಿಂತ ಭಿನ್ನವಾಗಿ ದಾವಣಗೆರೆ ಸಮ್ಮೇಳನ ನಡೆಯಬೇಕೆಂಬುದು ನಮ್ಮ ಮನದಾಸೆಯಾಗಿದೆ. ಈ ನಿಟ್ಟಿನಲ್ಲಿ ನಮ್ಮ ವೃತ್ತಿ ಬಾಂಧವರಿಗೆ ವಾರ್ಷಿಕ ಪ್ರಶಸ್ತಿ, ಇಲ್ಲಿನ ಸ್ಥಳೀಯ 60 ವರ್ಷ ಮೇಲ್ಪಟ್ಟವರನ್ನು ಸನ್ಮಾನ ಮಾಡಬೇಕೆಂದು ನಿರ್ಧರಿಸಲಾಗಿದೆ. ಇನ್ನು ಸಮ್ಮೇಳನ ಕೇವಲ 15 ದಿನ ಉಳಿದಿರುವುದರಿಂದ ಪ್ರತಿಯೊಂದು ಸಮಿತಿಗಳಿಗೆ ಮಹತ್ವದ ಜವಾಬ್ದಾರಿ ಇದೆ. ಪ್ರಮುಖವಾಗಿ ವಸತಿ, ಊಟೋಪಚಾರದಲ್ಲಿ ಯಾವುದೇ ತೊಂದರೆಯಾಗದಂತೆ ಸಮರ್ಥವಾಗಿ ನಿಭಾಯಿಸಬೇಕೆಂದು ಸಲಹೆ ನೀಡಿದರು.

ಸಮ್ಮೇಳನದ ಯಶಸ್ವಿಗೆ ಜಿಲ್ಲೆಯ ಪ್ರತಿಯೊಬ್ಬ ಪತ್ರಕರ್ತರು ಸ್ವಯಂಪ್ರೇರಿತವಾಗಿ ತಮ್ಮ ಕಾರ್ಯ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಯಾವುದೇ ಟೀಕೆ, ಟಿಪ್ಪಣಿ ಮಾಡದೆ ಒಗ್ಗಟ್ಟಿನಿಂದ, ಬದ್ಧತೆಯಿಂದ ಕೆಲಸ ಮಾಡಬೇಕೆಂದು ಸೂಚಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್ ಮಾತನಾಡಿ, ದಾವಣಗೆರೆಯಲ್ಲಿ ಸಮ್ಮೇಳನ ನಡೆಯಬೇಕೆಂದು ಹಠಕ್ಕೆ ಬಿದ್ದು, ತೆಗೆದುಕೊಂಡು ಬಂದಿದ್ದೇವೆ. ಯಾವುದೇ ಚ್ಯುತಿ ಬಾರದಂತೆ ಸಮ್ಮೇಳನ ಯಶಸ್ವಿಗೆ ಪ್ರತಿಯೊಬ್ಬರು ಸಹಕರಿಸಬೇಕೆಂದು ಮನವಿ ಮಾಡಿದರು.


ಈ ಸಂದರ್ಭದಲ್ಲಿ ಹಿರಿಯ ಪತ್ರಕರ್ತರಾದ ಎಚ್.ಬಿ.ಮಂಜುನಾಥ್, ಬಿ.ಎನ್.ಮಲ್ಲೇಶ್, ಮಂಜುನಾಥ ಗೌರಕ್ಕಳವರ, ಬಾ.ಮ.ಬಸವರಾಜಯ್ಯ, ಸದಾನಂದ ಹೆಗಡೆ, ಎಂ.ಬಿ.ನವೀನ್, ನಾಗರಾಜ ಬಡದಾಳ, ಮಲ್ಲಿಕಾರ್ಜುನ್ ಕಬ್ಬೂರು, ಆರ್.ರವಿಬಾಬು, ಕಾನಿಪ ಜಿಲ್ಲಾಧ್ಯಕ್ಷ ಮಂಜುನಾಥ ಏಕಬೋಟೆ, ಪ್ರಧಾನ ಕಾರ್ಯದರ್ಶಿ ಎ.ಫಕ್ರುದ್ದೀನ್, ಕಾನಿಪ ರಾಜ್ಯ ಸಮಿತಿ ಹಾಗೂ ಸಮ್ಮೇಳನದ ಸಂಚಾಲಕ ಕೆ.ಚಂದ್ರಣ್ಣ, ಖಜಾಂಚಿ ಎನ್.ವಿ.ಬದರಿನಾಥ್ ಸೇರಿದಂತೆ ಇನ್ನಿತರರಿದ್ದರು.

ಸಭೆಯ ನಂತರ ಸಮ್ಮೇಳನದ ಹಣಕಾಸು, ವಸತಿ, ಆಹಾರ, ಆರೋಗ್ಯ, ಸಾರಿಗೆ ಸೇರಿದಂತೆ ವಿವಿಧ ಸಮಿತಿಗಳ ಸಮ್ಮೇಳನ ನಿರ್ವಹಣೆ ಬಗ್ಗೆ ಗಂಭೀರವಾಗಿ ಚರ್ಚೆ ನಡೆಸಲಾಯಿತು.

# ಸಂಚಾರ ನಿಯಮ ಪಾಲಿಸಿ: ಜೀವ ರಕ್ಷಿಸಿಕೊಳ್ಳಿ

» ಚಳ್ಳಕೆರೆ

ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ಮೂಲಕ ಸಾರ್ವಜನಿಕರಿಗೆ ನೆಮ್ಮದಿಯ ಬದುಕನ್ನು ನೀಡುವ ಕಾರ್ಯವನ್ನು ಪೊಲೀಸ್ ಇಲಾಖೆ ಪ್ರಾಮಾಣಿಕತೆಯಿಂದ ಮಾಡುತ್ತಾ ಬಂದಿದೆ. ಇದರ ಜೊತೆಯಲ್ಲಿ ಸಮಾಜದ ಘಾತುಕ ಶಕ್ತಿಗಳನ್ನು ನಿಯಂತ್ರಿಸಬೇಕಲ್ಲದೆ, ಕಾನೂನು ಬಾಹಿರ ಚಟುವಟಿಕೆಗಳನ್ನು ತಡೆಯಬೇಕು. ಸಾರ್ವಜನಿಕರ ಪ್ರಾಣವನ್ನು ಸಂರಕ್ಷಣೆ ಮಾಡಲು ಸಂಚಾರ ನಿಯಮಗಳನ್ನು ಸಹ ಅನುಷ್ಠಾನಗೊಳಿಸಬೇಕು. ಸಾರ್ವಜನಿಕರ ಸಹಕಾರದಿಂದ ಮಾತ್ರ ಪೊಲೀಸ್ ಇಲಾಖೆಯ ಕಾರ್ಯ ಯಶಸುಕಾಣಲು ಸಾಧ್ಯವೆಂದು ಸಬ್‌ಇನ್ಸ್‌ಪೆಕ್ಟರ್ ಜೆ.ಶಿವರಾಜ್ ತಿಳಿಸಿದರು.




ಅವರು, ಇಲ್ಲಿನ ನೆಹರೂ ವೃತ್ತದಲ್ಲಿ ರಾಷ್ಟ್ರೀಯ ರಸ್ತೆ ಸುರಕ್ಷಾ ಸಪ್ತಾಹದ ಅಂಗವಾಗಿ ಪೊಲೀಸ್ ಇಲಾಖೆ ಹಮ್ಮಿಕೊಂಡಿದ್ದ ಸಡಕ್ ಸುರಕ್ಷ, ಜೀವನರಕ್ಷ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ವಿಶೇಷವಾಗಿ ದ್ವಿಚಕ್ರವಾಹನ ಹಾಗೂ ಆಟೋಚಾಲಕರು ಸಂಚಾರಿ ನಿಯಮಗಳನ್ನು ನಿಯಮಿತವಾಗಿ ಪಾಲಿಸುವಲ್ಲಿ ಅನೇಕ ತಪ್ಪುಗಳನ್ನು ಎಸಗುತ್ತಾರೆ.

ಚಾಲಕ ಎಸಗುವ ಸಣ್ಣತಪ್ಪಿಗೆ ಸಾರ್ವಜನಿಕರು, ಪೊಲೀಸ್ ಇಲಾಖೆ ಹೆಚ್ಚು ನಷ್ಟ ಅನುಭವಿಸಬೇಕಾಗುತ್ತದೆ. ಸಂಚಾರಿ ನಿಯಮಗಳನ್ನು ಪಾಲಿಸುವ ಜವಾಬ್ದಾರಿ ಚಾಲಕರದ್ದು , ಸಾರ್ವಜನಿಕರದ್ದಾಗಿರುತ್ತದೆ. ಪೊಲೀಸರ ಮಾರ್ಗದರ್ಶನ ಹಾಗೂ ಇಂತಹ ಜಾಗೃತಿ ಕಾರ್ಯಕ್ರಮಗಳಿಂದ ಅಪಘಾತಹಾಗೂ ಸಾವನ್ನು ನಿಯಂತ್ರಿಸಲು ಇಲಾಖೆಯೊಂದಿಗೆ ಕೈಜೋಡಿಸುವಂತೆ ಮನವಿ ಮಾಡಿದರು. ಜಾಗೃತಿಕಾರ್ಯಕ್ರಮದಲ್ಲಿ ಆಟೋಚಾಕರು, ಪೊಲೀಸ್ ಸಿಬ್ಬಂದಿ ಭಾಗವಹಿಸಿದ್ದರು.

# ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡುವಲ್ಲಿ ಶಿಕ್ಷಕರು ಶ್ರಮಿಸಬೇಕು



» ಚಳ್ಳಕೆರೆ

ಖಾಸಗಿ ವಿದ್ಯಾಸಂಸ್ಥೆಗಳು ಸಹ ತಾಲ್ಲೂಕಿನ ಶೈಕ್ಷಣಿಕ ಪ್ರಗತಿಗೆ ಪ್ರೇರಕವಾಗಿ ಕಾರ್ಯನಿರ್ವಹಿಸುತ್ತಿವೆ. ಶಾಲೆಗೆ ಬರುವ ಎಲ್ಲಾ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡುವ ಜವಾಬ್ದಾರಿ ಶಿಕ್ಷಕರು ಮತ್ತು ಆಡಳಿತ ಮಂಡಳಿಯ ಮೇಲಿದೆ. ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿ ತಮ್ಮ ಗುರಿಯಾಗಬೇಕೆಂದು ವೀರಶೈವ ಸಮಾಜದ ಹಿರಿಯ ಮುಖಂಡ ಟಿ.ಪ್ರಭುದೇವ್ ತಿಳಿಸಿದರು.

ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ಬಸವೇಶ್ವರ ಆಂಗ್ಲಮಾಧ್ಯಮ ಶಾಲೆಯ 2023-24ನೇ ವರ್ಷದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ಸಾವಿರಾರು ವಿದ್ಯಾರ್ಥಿಗಳಿಗೆ ಉತ್ತಮ ಬೋಧನೆ ಮಾಡಿರುವ ಈ ವಿದ್ಯಾಸಂಸ್ಥೆ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಅಭಿವೃದ್ಧಿ ಹೊಂದಲಿ ಎಂದು ಆಶಿಸುವುದಾಗಿ ತಿಳಿಸಿದರು.

ಸಂಸ್ಥೆಯ ಕಾರ್ಯದರ್ಶಿ ಕೋಟೆಜಯಣ್ಣ ಮಾತನಾಡಿ, ಖಾಸಗಿ ಶಿಕ್ಷಣ ಸಂಸ್ಥೆಗಳು ತಮಗೆ ಬರುವ ಅಲ್ಪ ಆದಾಯದಲ್ಲೇ ಚಟುವಟಿಕೆಗಳನ್ನು ನಡೆಸಬೇಕಿದೆ. ವಿದ್ಯಾಸಂಸ್ಥೆಗಳ ಅಭಿವೃದ್ಧಿಗೆ ಪೋಷಕರು ನೀಡುವ ಆರ್ಥಿಕ ಸಹಾಯವೇ ಮುಖ್ಯವಾಗುತ್ತದೆ. ನಮ್ಮ ವಿದ್ಯಾಸಂಸ್ಥೆಯಲ್ಲಿ ಯಾವುದೇ ರೀತಿಯ ನಿಯಂತ್ರಣವನ್ನು ಪೋಷಕರ ಮೇಲೆ ಮತ್ತು ಮಕ್ಕಳ ಮೇಲೆ ಏರದೆ ಶೈಕ್ಷಣಿಕ ಅಭಿವೃದ್ದಿಗಾಗಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿದ್ಯಾಸಂಸ್ಥೆ ಅಧ್ಯಕ್ಷ ಮಂಜುನಾಥ ವಹಿಸಿದ್ದರು. ಉಪಕಾರ್ಯದರ್ಶಿ ಬಸವರಾಜು, ಖಜಾಂಚಿ ಶಂಕರಲಿಂಗಯ್ಯ, ಸಂಸ್ಥೆಯ ನಿರ್ದೇಶಕರಾದ ಪ್ರಸನ್ನಕುಮಾರ್, ನಾಗಭೂಷಣ್, ಗುರುಸಿದ್ದಮೂರ್ತಿ, ಅನ್ನಪೂರ್ಣಪ್ರಕಾಶ್, ಕೆ.ಎಂ.ಪುಷ್ಪಲತಾ, ವಿಜಯ್, ಮುಖ್ಯ ಶಿಕ್ಷಕಿ ಮಧುರ ಮುಂತಾದವರು ಉಪಸ್ಥಿತರಿದ್ದರು. ವಿದ್ಯಾರ್ಥಿಗಳು ಮನೋರಂಜನಾ ಕಾರ್ಯಕ್ರಮ ನಡೆಸಿದರು.



ಇಂದು ಚಿತ್ರದುರ್ಗ ನಗರದ ರೈಲ್ವೆ ಸ್ಟೇಷನ್ ಬಳಿಯ ಅಹಲ್ಯಾ ವಿದ್ಯಾ ಮಂದಿರದಲ್ಲಿ ಸಂಕ್ರಾಂತಿ ಹಬ್ಬದ ಪ್ರಯುಕ್ತ ಆಯೋಜಿಸಿದ್ದ ಸಂಕ್ರಾಂತಿ ಸಂಭ್ರಮ -2024 ರ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿ,



ಮಕರ ಸಂಕ್ರಾಂತಿ ಹಬ್ಬದ ಪ್ರಯುಕ್ತ ಸೋಮವಾರ ಚಿತ್ರದುರ್ಗದ ಹೊಳಲ್ಕೆರೆ ರಸ್ತೆಯ ಕನಕ ವೃತ್ತದಲ್ಲಿ ಮಕ್ಕಳು ಎಳ್ಳು ಬೆಲ್ಲ ಬೀರಿ ಸಂಭ್ರಮಿಸಿದರು.

## ಗೋಸಿಕೆರೆಯ ಎನ್.ಲಕ್ಷ್ಮಿಗೆ ಪಿಎಚ್‌ಡಿ ಪದವಿ



ಚಳ್ಳಕೆರೆ: ತಾಲ್ಲೂಕಿನ ಪಶುರಾಮಪುರ ಹೋಬಳಿಯ ಗೋಸಿಕೆರೆ ಗ್ರಾಮದ ನರಸಿಂಹಮೂರ್ತಿ ಎಂಬುವವರ ಪುತ್ರಿ ಎಂ.ಲಕ್ಷ್ಮಿ ಹಂಪಿಕನ್ನಡ ವಿಶ್ವವಿದ್ಯಾಲಯದ ಡಾಕ್ಟರೇಟ್ ಪಡೆದಿದ್ದಾರೆ. ಕನ್ನಡದಲ್ಲಿ ಸ್ನಾತಕೋತ್ತರ ಪದವಿ ಪಡೆದ ಎನ್.ಲಕ್ಷ್ಮಿ ಹಂಪಿವಿಶ್ವವಿದ್ಯಾಲಯದ ಕನ್ನಡ ಸಾಹಿತ್ಯ ಅಧ್ಯಯನ ವಿಭಾಗದ ಡಾ.ಎಲ್.ಎಸ್.ಲೋಕೇಶ್‌ರವರ ಮಾರ್ಗದರ್ಶನದಲ್ಲಿ ಮಹಿಳಾ ಕನ್ನಡ ಆತ್ಮಕಥನಗಳಲ್ಲಿ ಸ್ತ್ರೀಆಸ್ಮಿತೆಯ ಹುಡುಕಾಟ ಎಂಬ ವಿಚಾರದಲ್ಲಿ ಮಂಡಿಸಿದ ಮಹಾಪ್ರಬಂಧಕ್ಕೆ ಪಿಎಚ್‌ಡಿ ಪದವಿ ಲಭಿಸಿದೆ.

## ಜಿ.ವಿ.ಜಗದೀಶ್‌ಗೆ ಪಿಎಚ್‌ಡಿ



ಚಳ್ಳಕೆರೆ: ತಾಲ್ಲೂಕಿನ ಯಲಗಟ್ಟೆ ಗ್ರಾಮದ ಕಮಲಮ್ಮ, ವಿರೂಪಾಕ್ಷಪ್ಪ ಎಂಬುವವರ ಪುತ್ರ ಜಿ.ವಿ.ಜಗದೀಶ್ ಹಂಪಿವಿಶ್ವವಿದ್ಯಾಲಯಲ್ಲಿ ಡಾಕ್ಟರೇಟನ್ನು ಪಡೆದಿದ್ದಾರೆ. ಆಧುನಿಕ ಕರ್ನಾಟಕದ ಕನ್ನಡ ಸಂಘಟನೆಗಳು ಚಿರಿತ್ರೆ ಮತ್ತು ವಿಮರ್ಶೆ ಮಹಾಪ್ರಂಬಂಧಕ್ಕೆ ಪಿಎಚ್‌ಡಿ ಲಭಿಸಿದೆ. ಕುಲಸಚಿವರಾದ ಡಾ.ವಿಜಯ್‌ಪೂಣಚ್ಚತಂಬಂಡ ಮಾರ್ಗದರ್ಶನದಲ್ಲಿ ಇವರು ಪ್ರಬಂಧವನ್ನು ಮಂಡಿಸಿದ್ದರು.

## ಪ್ರಮುಖ ಸುದ್ದಿ

ಪತಂಜಲಿ ಯೋಗಶಿಕ್ಷಣ ಸಮಿತಿಯಿಂದ ಸಂಕ್ರಾಂತಿ ಸಡಗರ

# ಅಗ್ನಿಹೋಮ, ಯೋಗಾಸನ ಮೂಲಕ ಸೂರ್ಯನಿಗೆ ನಮಸ್ಕಾರ

» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ನಗರದ ಶ್ರೀಪತಂಜಲಿಯೋಗ ಶಿಕ್ಷಣ ಸಮಿತಿ ವತಿಯಿಂದ ಸುಗ್ಗಿ ಹಬ್ಬ ಸಂಕ್ರಾಂತಿಯನ್ನು ಸಂಭ್ರಮ, ಸಡಗರಗಳಿಂದ ಆಚರಣೆ ಮಾಡಿದರು. ಇಲ್ಲಿನನಗರಸಭೆಮುಂಭಾಗದ ರಸ್ತೆಯಲ್ಲಿ ಪತಂಜಲಿ ಯೋಗ ಶಿಕ್ಷಣ ಸಮಿತಿಯ ಶಿಕ್ಷಕರು, ಮಹಿಳೆಯರು ಸೇರಿ ಸೂರ್ಯ ನಮಸ್ಕಾರ ಹಾಗೂ ವಿವಿಧ ಧಾನ್ಯಗಳ ಪೂಜೆ ಮೂಲಕ ಸಂಕ್ರಾಂತಿ ಹಬ್ಬವನ್ನು ಆಚರಿಸಿದರು.



ಪತಂಜಲಿ ಯೋಗ ಶಿಕ್ಷಣದ ಯೋಗಗುರು ಬಿ.ವಿ.ಮನೋಹರ ಮಾತನಾಡಿ, ಹೊಸವರ್ಷದ ಪ್ರಾರಂಭದಲ್ಲಿ ಮಕರಸಂಕ್ರಮಣವನ್ನು ನಾವು ಆಚರಣೆ ಮಾಡುತ್ತೇವೆ. ಮಕರ ಸಂಕ್ರಾಮಣದಿಂದ ಬದಲಾವಣೆಯ ಪರ್ವ ಆರಂಭವಾಗಲಿದೆ. ಈ ದಿನವನ್ನು ರೈತರೆಲ್ಲರೂ ಸೇರಿ ಸುಗ್ಗಿ ಹಬ್ಬವನ್ನಾಗಿಯೂ ಆಚರಿಸುತ್ತಾರೆ. ರೈತರು ಬೆಳೆದ ಎಲ್ಲಾ ಬೆಳೆಯನ್ನು ರಾಶಿಹಾಕಿ ರಾಶಿಪೂಜೆ ಮಾಡು ಮೂಲಕ ಈ ಹಬ್ಬ ಆಚರಣೆ ಮಾಡುತ್ತಾರೆ. ವಿಶೇಷವಾಗಿ ಹೊಲದಲ್ಲಿ ಬೆಳೆದ ಕಬ್ಬು,ಕುಂಬಳಕಾಯಿನ್ನು ತಂದು ಪೂಜಿಸುತ್ತಾರೆ. ಮಹಿಳೆಯರೂ ಸಹ ಆಸಕ್ತಿಯಿಂದ ಬಣ್ಣ, ಬಣ್ಣದ ಬೃಹದಾಕಾರದ ರಂಗೋಲಿ ಚಿತ್ರಿಸುವ ಮೂಲಕ ಮಕರ ಸಂಕ್ರಾಂತಿಯನ್ನು ಸ್ವಾಗತಿಸುತ್ತಾರೆ. ಇಂದು ಸಹ ನಮ್ಮ ಯೋಗ ಶಿಕ್ಷಣ ಸಂಸ್ಥೆಯ ಮಹಿಳೆಯರು ಸಂಪ್ರದಾಯಿಕ ಉಡುಗೆಯಿಂದ ವಿವಿಧ ರಂಗೋಲಿಗಳನ್ನು ಚಿತ್ರಿಸುವ ಮೂಲಕ ಎಲ್ಲರ ಗಮನ ಸೆಳೆದಿದ್ದಾರೆ. ಇಂತಹ ಸಂಭ್ರಮವನ್ನು ಕಣ್ತುಂಬಿಕೊಳ್ಳುವುದೇ ಸಂತಸ ವಿಷಯವೆಂದರು.

ಇದೇ ಸಂದರ್ಭದಲ್ಲಿ ಎಲ್ಲರೂ ಸೇರಿ ಸೂರ್ಯನಮಸ್ಕಾರ ಮತ್ತು ಅಗ್ನಿಹೋಮ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಸುಮಾರು ಎರಡು ಗಂಟೆಗಳಿಗೂ ಹೆಚ್ಚು ಕಾಲ ವಿವಿಧ ಯೋಗಗಳನ್ನು ಪ್ರದರ್ಶಿಸಲಾಯಿತು. ಕಸ್ತೂರಿ ಬಾ ಬಾಲಕಿಯರೂ ಸೇರಿದಂತೆ ನೂರಾರು ಸಾರ್ವಜನಿಕರು ಈ ಸಡಗರದಲ್ಲಿ ಸಾಕ್ಷಿಯಾಗಿದ್ದರು.

ಈ ಸಂದರ್ಭದಲ್ಲಿ ಬಿ.ವಿ.ನಾಗೇಶ್, ಸಿ.ತಿಪ್ಪೇಸ್ವಾಮಿ, ಶಿವನಾಗಪ್ಪ, ಕೆ.ನಾಗೇಶ್, ಸಿ.ಎಲ್.ತಿಪ್ಪೇಸ್ವಾಮಿ, ಫಣಿ, ಶಿವಕುಮಾರ್, ರಾಜಣ್ಣ, ಮಹೇಶ್, ಪ್ರಮೋದಆನಂದ, ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T